ಸಂಪುಟ : 10 ಸಂಚಿಕೆ: 280 ಪುಟ : 4+2 ಬೆಲೆ: 3.00 ರವಿವಾರ ಡಿಸೆಂಬರ್ 21 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 280 Pages : 4+2 Price : 3.00 Sunday December 21 2025 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಕ್ಷೇತ್ರದ ಅಭಿವೃದ್ಧಿ ಕುರಿತು ಶಾಸಕ ಡಾ. ಲಮಾಣಿ ಪ್ರಸ್ತಾಪ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ವಸತಿ ಶಾಲೆಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸಬೇಕು ಮತ್ತು ನಿರ್ಲಕ್ಷ್ಯಕ್ಕೊಳಗಾದ ಗ್ರಾಮೀಣ ಭಾಗದ ಕುಡಿಯುವ ನೀರಿನ ವ್ಯವಸ್ಥೆ, ಶಿಕ್ಷಣ, ಆರೋಗ್ಯ, ಆಡಳಿತ ವ್ಯವಸ್ಥೆ ಸರಿಪಡಿಸಬೇಕು ಎಂಬಿತ್ಯಾದಿ ಕ್ಷೇತ್ರದ ಅಭಿವೃದ್ಧಿ ಕುರಿತು ಬೆಳಗಾವಿಯ ಅಧಿವೇಶನದಲ್ಲಿ ಶಾಸಕ ಡಾ. ಚಂದ್ರು ಲಮಾಣಿ ಸರ್ಕಾರದ ಗಮನ ಸೆಳೆದರು.

ಶಿರಹಟ್ಟಿ ಮತಕ್ಷೇತ್ರದಲ್ಲಿ ಬರುವ ವಸತಿ ಶಾಲೆಗಳ ವಿದ್ಯಾರ್ಥಿಗಳಿಗೆ ಈ ಶೈಕ್ಷಣಿಕ ವರ್ಷ ಮುಗಿಯುತ್ತಾ ಬಂದರೂ ನೀಡಬೇಕಾದ ಸಾಮಗ್ರಿಗಳನ್ನು ಒದಗಿಸಿಲ್ಲ. ವಸತಿ ಶಾಲೆಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳು ಕಾರ್ಯ ನಿರ್ವಹಿಸುತ್ತಿಲ್ಲ. ಡೆಸ್ಕ್, ಬೆಡ್, ಪ್ರಯೋಗಾಲಯ ಸಾಮಗ್ರಿಗಳು, ನರ್ಸಿಂಗ್ ಕಿಟ್ ಪೂರೈಕೆಯಾಗಿಲ್ಲ. 5 ವಸತಿ ಶಾಲೆಗಳ ಪೈಕಿ ಎರಡು ವಿದ್ಯಾರ್ಥಿನಿಯರ ವಸತಿ ಶಾಲೆಗಳಿದ್ದು, ಅಲ್ಲಿ ಸುತ್ತಲೂ ಕಾಂಪೌಂಡ್ ವ್ಯವಸ್ಥೆ ಇಲ್ಲ. ಮುಂಡರಗಿಯ ಡಾ. ಬಿ.ಆರ್. ಅಂಬೇಡ್ಕರ್ ವಸತಿ ಶಾಲೆ ಬಾಡಿಗೆ ಕಟ್ಟಡದಲ್ಲಿದೆ. ಅಲ್ಲಿ ಸಾಕಷ್ಟು ಸಮಸ್ಯೆಗಳಿದ್ದು, ಭದ್ರತೆ ಇಲ್ಲ. ಕೂಡಲೇ ಸ್ಥಳಾಂತರ ಮಾಡಿ ವ್ಯವಸ್ಥೆ ಕಲ್ಪಿಸಬೇಕು ಎಂಒದು ಒತ್ತಾಯಿಸಿದರು.

ಈ ವೇಳೆ ಸಮಾಜ ಕಲ್ಯಾಣ ಸಚಿವ ಮಹಾದೇವಪ್ಪ ಶಾಸಕರ ಪ್ರಶ್ನೆಗೆ ಉತ್ತರಿಸಿ, ಈ ಕುರಿತಂತೆ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವದು ಎಂದು ಭರವಸೆ ನೀಡಿದರು.

2023–24ರಲ್ಲಿ ಲಕ್ಷ್ಮೇಶ್ವರ ತಾಲೂಕಿನ ಆದರಹಳ್ಳಿ ಸೇರಿದಂತೆ 37 ಗ್ರಾಮಗಳಿಗೆ ಕುಡಿಯುವ ▸▸ 3ನೇ ಪುಟಕ್ಕೆ

## ಅ.ಭಾ.ವೀ ಮಹಾಸಭಾ ಚುನಾವಣೆ ಘೋಷಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಭಾರತ ವೀರಶೈವ ಮಹಾಸಭಾಕ್ಕೆ 2024ರಲ್ಲಿ ಕಾರಣಾಂತರದಿಂದ ಚುನಾವಣೆ ನಡೆಯದ ತಾಲೂಕು, ಜಿಲ್ಲಾ, ರಾಜ್ಯ ಘಟಕಗಳಿಗೆ ಮಹಾಸಭಾ ಏಕಕಾಲದಲ್ಲಿ ಚುನಾವಣೆ ಜರುಗಿಸಲು ವೇಳಾ ಪಟ್ಟಿಯನ್ನು ಪ್ರಕಟಿಸಿದೆ.

ಗದಗ ಜಿಲ್ಲೆಯ ನರಗುಂದ, ಗಜೇಂದ್ರಗಡ, ಲಕ್ಷ್ಮೇಶ್ವರ ಹಾಗೂ ಶಿರಹಟ್ಟಿ ತಾಲೂಕು ಘಟಕಗಳಿಗೆ ಚುನಾವಣೆ ಜರುಗಲಿದೆ. ಮಹಾಸಭಾಕ್ಕೆ 31–12–2025ರೊಳಗೆ ಆಜೀವ ಸದಸ್ಯತ್ವ ಪಡೆದವರು ಚುನಾವಣೆಗೆ ಸ್ಪರ್ಧಿಸಲು ಹಾಗೂ ಮತಚಲಾಯಿಸಲು ಅರ್ಹರು. 15–01–2026ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಿಸಲಾಗುವದು.

23–01–2026ರ ಮುಂಜಾನೆ 10.30 ಗಂಟೆಯಿಂದ ನಾಮಪತ್ರ ಸ್ವೀಕಾರ ಆರಂಭಗೊಂಡು, 29–01–2026ರ ಮಧ್ಯಾಹ್ನ 3 ಗಂಟೆಯವರೆಗೆ ನಾಮಪತ್ರ ಸ್ವೀಕರಿಸಲು ಕೊನೆಯ ದಿನಾಂಕವಾಗಿದೆ. 02–02–2026 ಮಧ್ಯಾಹ್ನ 3 ಗಂಟೆಯವರೆಗೆ ನಾಮಪತ್ರ ಹಿಂಪಡೆಯುವ ದಿನಾಂಕವಾಗಿದ್ದು, 15–02–2026 ಮುಂಜಾನೆ 8ರಿಂದ ಸಂಜೆ 4 ಗಂಟೆಯವರೆಗೆ ಮತದಾನ ನಡೆದು ಅಂದೇ ಸಂಜೆ ಮತಗಳ ಎಣಿಕೆ ನಡೆಯಲಿದೆ ಎಂದು ಅಖಿಲ ಭಾರತ ವೀರಶೈವ ಮಹಾಸಭಾದ ಗದಗ ಜಿಲ್ಲಾಧ್ಯಕ್ಷ ಶರಣಬಸಪ್ಪ ಗುಡಿಮನಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಮಹಾಸಭಾದ ಜಿಲ್ಲಾ ಕಾರ್ಯದರ್ಶಿ ಮುರುಘರಾಜೇಂದ್ರ ಬಡ್ನಿ (9945037111) ಅವರನ್ನು ಸಂಪರ್ಕಿಸಬಹುದು.

### ಟೆನ್ನಿಕಾಯಿಟ್ ಪಂದ್ಯಾಟಗಳ ಉದ್ಘಾಟನೆ ನೆರವೇರಿಸಿದ ಸಚಿವ ಎಚ್.ಕೆ. ಪಾಟೀಲ

# ಜಿಲ್ಲೆಯ ಕ್ರೀಡಾಪಟುಗಳು ರಾಷ್ಟ್ರ ಮಟ್ಟದಲ್ಲಿ ಮಿಂಚಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕಲೆ, ಸಾಹಿತ್ಯ, ಸಂಸ್ಕೃತಿಯ ನೆಲೆಬೀಡಾದ ಗದಗ ಜಿಲ್ಲೆ ಕ್ರೀಡಾಕ್ಷೇತ್ರಕ್ಕೂ ಅಪಾರ ಕೊಡುಗೆಯನ್ನು ನೀಡಿದೆ. ಗದುಗಿನಿಂದ ಅಂತಾರಾಷ್ಟ್ರೀಯ ಮತ್ತು ರಾಷ್ಟ್ರೀಯ ಮಟ್ಟದ ಹಾಕಿ, ಕ್ರಿಕೆಟ್, ಕುಸ್ತಿ, ವಾಲಿಬಾಲ್ ಮತ್ತು ಅಥ್ಲೆಟಿಕ್ಸ್ ಕ್ರೀಡಾಪಟುಗಳು ಹೊರಹೊಮ್ಮಿದ್ದಾರೆ. ಇಂತಹ ಗದಗ ಜಿಲ್ಲೆಯಲ್ಲಿ ರಾಜ್ಯಮಟ್ಟದ ಪ.ಪೂ ಕಾಲೇಜು ವಿದ್ಯಾರ್ಥಿಗಳ ಟೆನ್ನಿಕಾಯಿಟ್ ಪಂದ್ಯಾಟಗಳು ನಡೆಯುತ್ತಿರುವುದು ಸ್ವಾಗತಾರ್ಹ. ಗದಗ ಜಿಲ್ಲೆಯಿಂದ ಅನೇಕ ರಾಷ್ಟ್ರೀಯ ಮಟ್ಟದ ಟೆನ್ನಿಕಾಯಿಟ್ ಕ್ರೀಡಾಪಟುಗಳು ಹೊರಹೊಮ್ಮಲೆಂದು ಕಾನೂನು ಮತ್ತು ಪ್ರವಾಸೋದ್ಯಮ ಸಚಿವ ಡಾ. ಎಚ್.ಕೆ. ಪಾಟೀಲ ಆಶಿಸಿದರು.

ಅವರು ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ), ಪದವಿಪೂರ್ವ ಕಾಲೇಜುಗಳ ಪ್ರಾಚಾರ್ಯರ ಸಂಘ, ಕರ್ನಾಟಕ ರಾಜ್ಯ ಪದವಿ ಪೂರ್ವ ಮಹಾವಿದ್ಯಾಲಯಗಳ ನೌಕರರ ಸಂಘ, ಕರ್ನಾಟಕ ರಾಜ್ಯ ಪದವಿಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘ, ದೈಹಿಕ ಶಿಕ್ಷಣ ಉಪನ್ಯಾಸಕರ ಸಂಘ, ಪ.ಪೂ.ಶಿ ಇಲಾಖೆ ಬೋಧಕೇತರ ಸಂಘದ ಜಿಲ್ಲಾ ಘಟಕಗಳ ಸಂಯುಕ್ತಾಶ್ರಯದಲ್ಲಿ ಶನಿವಾರ ಸಂಜೆ



ಗದುಗಿನ ಕೆ.ಎಚ್. ಪಾಟೀಲ ಕ್ರೀಡಾಂಗಣದಲ್ಲಿ ನೆರವೇರಿದ ಕರ್ನಾಟಕ ರಾಜ್ಯ ಪ.ಪೂ ಕಾಲೇಜು ವಿದ್ಯಾರ್ಥಿಗಳ ರಾಜ್ಯಮಟ್ಟದ ಟೆನ್ನಿಕಾಯಿಟ್ ಪಂದ್ಯಾಟಗಳನ್ನು ಉದ್ಘಾಟಿಸಿ ಮಾತನಾಡಿದರು.

ಕರ್ನಾಟಕ ಸರಕಾರದಿಂದ ಗದಗ ಜಿಲ್ಲೆಯಲ್ಲಿ ಕ್ರೀಡಾಪಟುಗಳಿಗೆ ಅನುಕೂಲವಾಗುವ ರೀತಿಯಲ್ಲಿ ಅನೇಕ ಸೌಲಭ್ಯಗಳನ್ನು ಕಲ್ಪಿಸಿಕೊಡಲಾಗಿದೆ. ರಾಷ್ಟ್ರೀಯ ಮಟ್ಟದ ಹಾಕಿ ಪಂದ್ಯಾಟಗಳನ್ನು ಆಡಿಸಬಹುದಾದಂತಹ ಮಹಾತ್ಮ ಗಾಂಧಿ ಹಾಕಿ ಟರ್ಫ್ ಗ್ರೌಂಡ್, ಕ್ರಿಕೆಟ್ ನೆಟ್ ಪ್ರಾಕ್ಟಿಸ್ ಗ್ರೌಂಡ್, ನಾಲ್ಕು ಈಜುಕೊಳಗಳು ಈಗಾಗಲೇ ಕ್ರೀಡಾಪಟುಗಳಿಗೆ ಸದ್ಬಳಕೆಯಾಗುತ್ತಿದ್ದು, ಶೀಘ್ರದಲ್ಲಿಯೇ ಕಳಸಾಪೂರ ರಸ್ತೆಯಲ್ಲಿರುವ ಒಳಾಂಗಣ ಕ್ರೀಡಾಂಗಣದಲ್ಲಿ ವುಡನ್ ಕೋರ್ಟ್‌ನ್ನು ಸಿದ್ಧಪಡಿಸಲಾಗುವುದು ಎಂದರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡ ವಿಧಾನ ಪರಿಷತ್ ಸದಸ್ಯ ಪ್ರೊ. ಎಸ್.ವ್ಹಿ. ಸಂಕನೂರ ಮಾತನಾಡಿ, ಕ್ರೀಡಾಪಟುಗಳಿಗೆ ಮಾರ್ಗದರ್ಶನ ಮಾಡಲು ಸರ್ಕಾರವು

> ಕೆ.ಎಚ್. ಪಾಟೀಲ ಸ್ಟೇಡಿಯಂನಲ್ಲಿ ಫುಟ್‌ಬಾಲ್ ಟರ್ಫ್ ಮೈದಾನ ಮತ್ತು ಫ್ಲಡ್‌ಲೈಟ್ ವ್ಯವಸ್ಥೆಗಳನ್ನು ಕಲ್ಪಿಸಲಾಗುವುದು. ಈ ಎಲ್ಲ ಕ್ರೀಡಾ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ಜಿಲ್ಲೆಯ ಕ್ರೀಡಾಪಟುಗಳು ರಾಷ್ಟ್ರೀಯ ಮಟ್ಟದಲ್ಲಿ ಸಾಧನೆಗೈಯಬೇಕೆಂದು ಸಚಿವ ಎಚ್.ಕೆ. ಪಾಟೀಲ ಕ್ರೀಡಾಪಟುಗಳಿಗೆ ಶುಭ ಹಾರೈಸಿದರು.

ಪ್ರಾಥಮಿಕ, ಪ್ರೌಢ, ಪದವಿಪೂರ್ವ ಮತ್ತು ಪದವಿ ಕಾಲೇಜುಗಳಲ್ಲಿ ದೈಹಿಕ ಶಿಕ್ಷಕರು ಮತ್ತು ಉಪನ್ಯಾಸಕರ ನೇಮಕಾತಿ ಮಾಡಿಕೊಳ್ಳಬೇಕೆಂದು ಸರ್ಕಾರವನ್ನು ಆಗ್ರಹಿಸಿದರು.

ಸಮಾರಂಭದಲ್ಲಿ ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕ್ಬರಸಾಬ ಬಬರ್ಚಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಉಪವಿಭಾಗಾಧಿಕಾರಿ ಗಂಗಪ್ಪ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಗದಗ ಜಿ.ಪಂ ಮಾಜಿ ಅಧ್ಯಕ್ಷರುಗಳಾದ ವಾಸಣ್ಣ ಕುರುಡಗಿ, ಸಿದ್ದಲಿಂಗೇಶ ಪಾಟೀಲ, ಕ್ರೀಡಾ ವೀಕ್ಷಕರಾಗಿ ಆಗಮಿಸಿದ ಹಾಸನದ ಕೃಷ್ಣಪ್ಪ, ನಿರ್ಣಾಯಕರ ತಂಡದ ಮುಖ್ಯಸ್ಥರಾದ ನವೀನಕುಮಾರ ಹಾಗೂ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ ವಿಶೇಷ ▸▸ 4ನೇ ಪುಟಕ್ಕೆ

### ಗದಗ ತಾಲೂಕು ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದಿಂದ ವಿಶೇಷ ಸಭೆ

# ಅಧಿಕಾರಿಗಳು ಇಚ್ಛಾಶಕ್ತಿಯಿಂದ ಕೆಲಸ ನಿರ್ವಹಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಬಿಪಿಎಲ್‌ನಿಂದ ಎಪಿಎಲ್ ಆಗಿರುವ ಪಡಿತರ ಚೀಟಿಗಳನ್ನು ಬಿಪಿಎಲ್‌ಗೆ ಬದಲಾಯಿಸುವ ಕಾರ್ಯಕ್ಕೆ ಮುಂದಾಗಬೇಕು. ಅರ್ಹ ಫಲಾನುಭವಿಗಳು ಅನ್ನಭಾಗ್ಯ ಯೋಜನೆಯ ಸೌಲಭ್ಯ ಪಡೆದುಕೊಳ್ಳುವಂತಾಗಬೇಕು ಎಂದು ಗದಗ ತಾಲೂಕು ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ತಿಳಿಸಿದರು.

ನಗರದ ಉಪವಿಭಾಗಾಧಿಕಾರಿಗಳ ಕಾರ್ಯಾಲಯದ ಪಂಚ ಗ್ಯಾರಂಟಿ ಕಚೇರಿಯಲ್ಲಿ ಶನಿವಾರ ಗದಗ ತಾಲೂಕು ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದಿಂದ ಪಡಿತರ ಚೀಟಿ ವಿಶೇಷ ಸಭೆಯನ್ನು ಜರುಗಿಸಿ ಮಾತನಾಡಿದರು.

ಅನ್ನ ಭಾಗ್ಯ ಯೋಜನೆಯು ರಾಜ್ಯ ಸರ್ಕಾರದ ಮಹಾತ್ವಾಕಾಂಕ್ಷಿ ಯೋಜನೆಯಾಗಿದ್ದು, ಸಮಾಜದ ಕಟ್ಟಕಡೆಯ ಕುಟುಂಬದ ಹಸಿವು ನೀಗಿಸಲು ಅನ್ನಭಾಗ್ಯ ಯೋಜನೆ ಸಹಕಾರಿಯಾಗಿದೆ. ಈ ಸೌಲಭ್ಯ ಅರ್ಹ ಫಲಾನುಭವಿಗಳಿಗೆ ನಿಗದಿತ ಸಮಯದಲ್ಲಿಯೇ ತಲುಪುವಂತಾಗಲು ಸಂಬಂಧಿತ ಅಧಿಕಾರಿಗಳು ಇಚ್ಛಾಶಕ್ತಿಯಿಂದ ಕೆಲಸ ನಿರ್ವಹಿಸಬೇಕು ಎಂದರು. ಗದಗ ತಾಲೂಕು ಪಂಚ ಗ್ಯಾರಂಟಿ ಸಮಿತಿ ನಿರ್ದೇಶನದ ಮೇರೆಗೆ ಬಿಪಿಎಲ್ ಪಡಿತರ ಚೀಟಿಯಿಂದ ವಂಚಿತರಾದವರನ್ನು ಗುರುತಿಸಿ ಪಟ್ಟಿ ಮಾಡಬೇಕು. ಎಎವೈ (ಅಂತ್ಯೋದಯ ಅನ್ನ ಯೋಜನಾ)/ ಬಿಪಿಎಲ್‌ನಿಂದ



> ಗದಗ ತಾಲೂಕು ಪಂಚ ಗ್ಯಾರಂಟಿ ಸಮಿತಿಯ ಸದಸ್ಯರಾದ ಕೃಷ್ಣಗೌಡ ಪಾಟೀಲ ಮಾತನಾಡಿ, ಗದಗ ಮತಕ್ಷೇತ್ರದಲ್ಲಿರುವ ಬಡ ಕುಟುಂಬದವರನ್ನು ಗುರುತಿಸಿ ಪಟ್ಟಿ ಮಾಡಿ ಅವರಿಗೆ ಬಿಪಿಎಲ್ ಕಾರ್ಡ್ ಮಂಜೂರು ಮಾಡಲು ಅಧಿಕಾರಿಗಳಿಗೆ ಸೂಚಿಸಿದರು. ಬಿಪಿಎಲ್ ಕಾರ್ಡ್ ಮಂಜೂರಾತಿಗಾಗಿ ಬಾಕಿ ಉಳಿದಿರುವ ಅರ್ಜಿಗಳ ಸೂಕ್ತ ಪರಿಶೀಲನೆ ನಡೆಸಿ ನಿಗದಿತ ಅವಧಿಯಲ್ಲಿಯೇ ವಿಲೇವಾರಿ ಮಾಡಿ ಮಂಜೂರಾತಿಗೆ ಕ್ರಮ ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಎಪಿಎಲ್‌ಗೆ ಬದಲಾವಣೆಯಾಗಿರುವ ಪಡಿತರ ಚೀಟಿಗಳನ್ನು ಎಎವೈ/ ಬಿಪಿಎಲ್‌ಗೆ ಬದಲಾಯಿಸಬೇಕಾದರೆ ಹೊಸದಾಗಿ ಅರ್ಜಿ ಸಲ್ಲಿಸಬೇಕು ಹಾಗೂ ಸಲ್ಲಿಸಬೇಕಾದ ದಾಖಲೆ ಹಾಗೂ ಹೆಚ್ಚಿನ ವಿವರಗಳಿಗಾಗಿ ಗ್ರಾಮೀಣ ಭಾಗದಲ್ಲಿ ಪಡಿತರ ಚೀಟಿಗಳ ಮಾಹಿತಿಗಾಗಿ ತಹಸೀಲ್ದಾರ ಕಚೇರಿಯಲ್ಲಿ ಇರುವ ಆಹಾರ ವಿಭಾಗಕ್ಕೆ ಹಾಗೂ ಗದಗ–ಬೆಟಗೇರಿ ಶಹರದಲ್ಲಿ ಬರುವ ಪಡಿತರ ಚೀಟಿಗಳ ಮಾಹಿತಿಗಾಗಿ ಗದಗ–ಬೆಟಗೇರಿ ನಗರಾಭಿವೃದ್ಧಿ ಕಾರ್ಯಾಲಯದ ಹತ್ತಿರವಿರುವ ಸಹಾಯಕ ನಿರ್ದೇಶಕ ಕಾರ್ಯಾಲಯ ಸಂಪರ್ಕಿಸಬಹುದಾಗಿದೆ ಎಂದರು. ಈ ಸಂದರ್ಭದಲ್ಲಿ ಸಮಿತಿಯ ಸದಸ್ಯರಾದ ಸಾವಿತ್ರಿ ಹೂಗಾರ, ಮಲ್ಲು ಬಾರ್ಕೇಕರ, ಸಂಗಮೇಶ ಕರಕಲಮಟ್ಟಿ, ನಗರಾಭಿವೃದ್ಧಿ ಪ್ರಾಧಿಕಾರದ ಸದಸ್ಯರಾದ ಬಸವರಾಜ ಕಡೆಮನಿ, ಆಹಾರ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

> **ಅಗತ್ಯ ದಾಖಲೆಗಳು**
>
> ಏಪ್ರಿಲ್–2022ರಿಂದ 2025ರವರೆಗೆ (3ವರ್ಷದ ಬ್ಯಾಂಕ್ ಸ್ಟೇಟ್‌ಮೆಂಟ್) ಕುಟುಂಬದಲ್ಲಿ ಯಾರಾದರೂ ಸರಕಾರಿ/ ಅರೆಸರ್ಕಾರಿ/ ಸಂಸ್ಥೆ/ ಕಂಪನಿಯಲ್ಲಿ ಕಾರ್ಯನಿರ್ವಹಿಸುವ ಕುಟುಂಬ ಸದಸ್ಯರ) :ಜಿಎಸ್‌ಟಿ/ ಇನ್‌ಕಂ ಟ್ಯಾಕ್ಸ್ ತುಂಬುವ ಬಗ್ಗೆ ಮಾಹಿತಿ, ಕುಟುಂಬಕ್ಕೆ ಇರುವ ಜಮೀನಿನ ಮಾಹಿತಿ, ರೇಶನ್ ಕಾರ್ಡ್ ಝರಾಕ್ಸ್ ಪ್ರತಿ, ಕುಟುಂಬದ ಎಲ್ಲರ ಆಧಾರ್ ಕಾರ್ಡ್ ಝರಾ–ಕ್ಸ್ ಪ್ರತಿ ಎಲ್ಲ ದಾಖಲಾತಿಗಳೊಂದಿಗೆ ನೇರವಾಗಿ ಪಡಿತರ ಚೀಟಿದಾರರು ಲಿಖಿತವಾಗಿ ತಹಸೀಲ್ದಾರರಿಗೆ ಮನವಿಯನ್ನು ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಗ್ರಾಮೀಣ ಭಾಗದಲ್ಲಿ ಪಡಿತರ ಚೀಟಿಗಳ ಮಾಹಿತಿಗಾಗಿ ತಹಸೀಲ್ದಾರ ಕಚೇರಿ, ಗದಗ–ಬೆಟಗೇರಿ ನಗರದ ನಗರಾಭಿವೃದ್ಧಿ ಕಾರ್ಯಾಲಯದ ಹತ್ತಿರ ಇರುವ ಸಹಾಯಕ ನಿರ್ದೇಶಕ ಕಾರ್ಯಾಲಯಕ್ಕೆ ಭೇಟಿ ನೀಡಬೇಕು.

## ಆಧ್ಯಾತ್ಮಿಕ ಪ್ರವಚನದಿಂದ ಬದುಕಿಗೆ ನೆಮ್ಮದಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಆಧ್ಯಾತ್ಮಿಕ ಪುರಾಣ–ಪ್ರವಚನಗಳು ಪ್ರತಿಯೊಬ್ಬರಿಗೂ ಜೀವನ ವಿಕಾಸಕ್ಕೆ ದಾರಿ ತೋರಬಲ್ಲವು. ಪ್ರವಚನ ಆಲಿಸುವದರಿಂದ ಜೀವನದಲ್ಲಿ ನೆಮ್ಮದಿ ಲಭಿಸುವ ಮಾರ್ಗದರ್ಶನ ಸಿಗುತ್ತದೆ ಎಂದು ನೆಗಳೂರಿನ ಸಂಸ್ಥಾನ ಹಿರೇಮಠದ ಪೂಜ್ಯ ಗುರುಶಾಂತೇಶ್ವರ ಶಿವಯೋಗಿ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಸಮೀಪದ ಬೈರಾಪುರಗ್ರಾಮದಲ್ಲಿ ನೆಗಳೂರ ಸಂಸ್ಥಾನ ಹಿರೇಮಠದ ನೂತನ ಮಹಾರಥ ಲೋಕಾರ್ಪಣೆ ಹಾಗೂ ಜಾತ್ರಾಮಹೋತ್ಸವ ನಿಮಿತ್ತ ಜರುಗುತ್ತಿರುವ ಪರಿವರ್ತನೆಯೆಡೆಗೆ ಧರ್ಮಜಾಗೃತಿ ಪ್ರವಚನ ಕಾರ್ಯಕ್ರಮದ 9ನೇ ಕಾರ್ಯಕ್ರಮ ಉದ್ಘಾಟಿಸಿ ಆರ್ಶೀವಚನ ನೀಡಿದರು.

ಪ್ರವಚನ ಆಲಿಸುವುದರಿಂದ ನಮ್ಮ ಅಂತರಂಗ ಪರಿಶುದ್ಧವಾಗುತ್ತದೆ. ಅದಕ್ಕಾಗಿ ಮಹಾತ್ಮರೆಲ್ಲರೂ ಸಹ ಸಂಸಾರದಲ್ಲಿದ್ದುಕೊಂಡೇ ಸಸಾರದ ಕಡೆಗೆ ಒಲವು ಹೊಂದಿ ಆಧ್ಯಾತ್ಮದ ಮಹಾ ಬೆಳಕಲ್ಲಿ ನೆಮ್ಮದಿಯ ಬದುಕು ಸಾಗಿಸಿದರು. ಅಂತಹ ಬದುಕು ಎಲ್ಲರದ್ದಾಗಬೇಕು ಎಂದರು.

ಪ್ರವಚನಕಾರ ಡಾ. ಗುರುಮಹಾಂತಯ್ಯ ಶಾಸ್ತ್ರೀ ಮಾತನಾಡಿ, ಸಂತ ಮಹಾತ್ಮರ ಜೀವನಚರಿತ್ರೆ ಆಧಾರಿತ ಪ್ರವಚನ ಕೇಳುವುದರಿಂದ ಮನಸ್ಸಿಗೆ ಅಂಟಿದ ದುರಾಲೋಚನೆಗಳು ದೂರವಾಗಿ ಬದುಕು ಹಸನಾಗುವುದು. ಆ ನಿಟ್ಟಿನಲ್ಲಿ ನೆಳೂರಿನ ಶ್ರೀಗಳು ಕಳೆದ ಒಂದೂವರೆ ತಿಂಗಳಿನಿಂದ ಆಯ್ದ ಗ್ರಾಮಗಳಲ್ಲಿ ಪ್ರವಚನ ಆಯೋಜಿಸಿ ಸದ್ಭಕ್ತರನ್ನು ಸನ್ಮಾರ್ಗದೆಡೆಗೆ ಕರೆದೊಯ್ಯುವ ಪ್ರಯತ್ನ ಮಾಡುತ್ತಿದ್ದಾರೆ. ಈ ಕಾರ್ಯಕ್ರಮದಲ್ಲಿ ಶ್ರೀಗಳಿಂದ ಸದ್ಭಾವನಾ ಪಾದಯಾತ್ರೆ, ದುಶ್ಚಟಗಳ ಭಿಕ್ಷೆ, ಸದ್ಗುಣಗಳ ದೀಕ್ಷೆ ಅಭಿಯಾನ, ಮಹಿಳೆಯರಿಗೆ ಉಡಿ ತುಂಬುವ ಕಾರ್ಯಕ್ರಮ ಜರುಗುವುದು ಎಂದರು.

ಕಾರ್ಯಕ್ರಮದಲ್ಲಿ ಹಿರೇಮರಳಿಹಳ್ಳಿಯ ಷಣ್ಮುಖಪ್ಪ ಕಮ್ಮಾರ ತಬಲಾ ಸಾಥ್ ನೀಡಿದರು. ಕಾರ್ಯಕ್ರಮದಲ್ಲಿ ಬೈರಾಪುರ, ಇಚ್ಚಂಗಿ, ಕಲಿವಾಳ, ನೆಗಳೂರ ಗ್ರಾಮಸ್ಥರು ಭಾಗಿಯಾಗಿದ್ದರು.

### ಬಲ್ಡೋಟಾ ಕೈಗಾರಿಕಾ ವಿಸ್ತರಣೆ ವಿರೋಧಿಸಿ ನಡೆಯುತ್ತಿರುವ ಹೋರಾಟ ಬೆಂಬಲಿಸಿದ ಎನ್.ಕೆ.ಪಿ.ಎಂ ಪ್ರೌಢಶಾಲೆ

# ಯಾವುದೇ ಅಭಿವೃದ್ಧಿ ಜೀವ ತೆಗೆಯುವಂತಿರಬಾರದು

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಜಿಲ್ಲಾ ಕೇಂದ್ರ, ಭಾಗ್ಯನಗರದ 1.5 ಲಕ್ಷ ಜನರ ಜೀವ, ಆರೋಗ್ಯ ಕಾಳಜಿ ಇಲ್ಲದೆ ಸರ್ಕಾರ 54 ಸಾವಿರ ಕೋಟಿ ವೆಚ್ಚ ಮಾಡಿ ಬಲ್ಡೋಟಾ ವಿಸ್ತರಣೆಗೆ ಅವಕಾಶ ಕೊಟ್ಟಿದ್ದು ಸರಿಯಲ್ಲ ಎಂದು ಎನ್.ಕೆ.ಪಿ.ಎಂ ಇಂಗ್ಲಿಷ್ ಮೀಡಿಯಂ ಪ್ರೌಢಶಾಲೆಯ ಸಂಸ್ಥಾಪಕ ಅಧ್ಯಕ್ಷ ಬಿ.ಕೆ. ಪಟ್ಟಣಶೆಟ್ಟಿ ಅಸಮಾಧಾನ ವ್ಯಕ್ತಪಡಿಸಿದರು.

ಅವರು ಕೊಪ್ಪಳ ಜಿಲ್ಲಾ ಬಚಾವೋ ಆಂದೋಲನ ಸಮಿತಿ ಹಾಗೂ ಪರಿಸರ ಹಿತರಕ್ಷಣಾ ವೇದಿಕೆ ಜಂಟಿ ಕ್ರಿಯಾ ವೇದಿಕೆ ನಡೆಸುತ್ತಿರುವ ಅನಿರ್ದಿಷ್ಟ ಧರಣಿಯ 51ನೇ ದಿನದ ಹೋರಾಟಕ್ಕೆ ಪ್ರೌಢಶಾಲೆಯ ಶಿಕ್ಷಕರು, ವಿದ್ಯಾರ್ಥಿಗಳೊಂದಿಗೆ ಹೋರಾಟವನ್ನು ಬೆಂಬಲಿಸಿ ಮಾತನಾಡಿದರು.

ಈಗಿರುವ ಪೆಲೆಟ್ ಒಂದು ಘಟಕದಿಂದ ಆಗುತ್ತಿರುವ ಅನಾಹುತವೇ ದೊಡ್ಡದು. ಮತ್ತೆ



ಸ್ಟೀಲ್– ವಿದ್ಯುತ್ ಉತ್ಪಾದನೆಗಾಗಿ ವಿಸ್ತರಣೆ ಮಾಡಲು ಮುಂದಾಗಿದ್ದು ಸರಿಯಲ್ಲ. ಕೈಗಾರಿಕೆಗಳು ಜನವಸತಿ ಇದ್ದ ಕಡೆ ಇರಕೂಡದು. ವಿಷಾನಿಲ ಉಗುಳಿ ಮಾಲಿನ್ಯ ಮಾಡುವ ಕಾರ್ಖಾನೆಗಳಂತೂ ಜನವಸತಿಯಿಂದ ದೂರವಿದ್ದು, ಬಫರ್ ವಲಯ ಇಟ್ಟುಕೊಂಡು 15–20 ಕಿ.ಮೀ. ದೂರವಿರಬೇಕು. ನಾವ್ಯಾರೂ ಕೈಗಾರಿಕಾ ವಿರೋಧಿಗಳಲ್ಲ. ಅಭಿವೃದ್ಧಿ ಕೃಷಿಯಿಂದಾದರಷ್ಟೇ ದೇಶದ ಜಿ.ಡಿ.ಪಿ ಸ್ಥಿರವಾಗಿರುತ್ತದೆ. ಕೈಗಾರಿಕೆಗಳಿಂದ ಆಗುವ ಅಭಿವೃದ್ಧಿ ಯಾವಾಗಲೂ ಬಿದ್ದು ಹೋಗಬಹುದು. ಕಾರ್ಖಾನೆ ಸ್ಥಾಪನೆಗಾಗಿ, ಜನವಸತಿಗಾಗಿ ಭೂಮಿ ಅನಗತ್ಯವಾಗಿ ಬಳಕೆ–ಯಾಗುತ್ತಿದೆ. ಇದು ಭವಿಷ್ಯದ ಕೃಷಿಗೆ ಎದುರಾಗುವ ಅಪಾಯವಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು.

> ಎನ್.ಕೆ.ಪಿ.ಎಂ. ಹೈಸ್ಕೂಲ್ ವಿದ್ಯಾರ್ಥಿಗಳಾದ ದೀಪಕ್, ವೈಷ್ಣವಿ, ಆದಿಲ್, ಸುಮಯ್ಯ, ಇವರುಗಳು ಚಿಪ್ಕೋ, ಕೈಗಾ, ಅಪ್ಪಿಕೋ, ನರ್ಮದಾ, ಸೈಲೆಂಟ್ ವ್ಯಾಲಿ ಚಳವಳಿ ಮತ್ತು ಸಾಲುಮರದ ತಿಮ್ಮಕ್ಕ ಅವರನ್ನು ಉದಾಹರಿಸಿ ಭಾಷಣ ಮಾಡಿದರು. ಶಿಕ್ಷಕರಾದ ಬಿ.ಎಂ. ನಿತಿನ್ ಶರ್ಮಾ, ರಂಗಮ್ಮ ಮಾತನಾಡಿ, ನಮ್ಮ ಅನಾರೋಗ್ಯಕ್ಕೆ ಕಾರಣವಾಗುವ ಈ ಕಾರ್ಖಾನೆಗಳು ಜೀವ ತೆಗೆಯುವಾಗಲೂ ಎಚ್ಚರಿಕೆ ವಹಿಸದಿದ್ದರೆ ಭವಿಷ್ಯ ಭಯಂಕರವಾಗಿದೆ. ನಾವಲ್ಲದೆ ಎಲ್ಲಾ ತಿಳಿದವರು, ಪ್ರಜ್ಞಾವಂತ ಜನರು ಮುಂದೆ ಬಂದು ಪ್ರತಿ–ರೋಧ ತೋರಲಿ ಎಂದರು.

ಧರಣಿಯಲ್ಲಿ ಪ್ರಧಾನ ಸಂಚಾಲಕ ಅಲ್ಲಮಪ್ರಭು ಬೆಟ್ಟದೂರು, ಸಂಚಾಲಕ ಮಲ್ಲಿಕಾರ್ಜುನ ಬಿ. ಗೋನಾಳ, ಮಂಜುನಾಥ ಜಿ.ಗೊಂಡಬಾಳ, ಶಾಲಾ ಶಿಕ್ಷಕರಾದ ಉದಯಕುಮಾರ್ ಎಂ.ಕೆ, ಮಲ್ಲಪ್ಪ ಕಿನ್ನಾಳ, ಶಿಕ್ಷಕಿ ವಿಜೇತಾ ಎಂ, ಬಿಂದಿಯಾ ಬಿ, ವೆಂಕಟಲಕ್ಷ್ಮೀ, ಸವಿತಾ ಸಾಕ್ರೆ, ಲಕ್ಷ್ಮೀ ವಿಜಯಮುದ್ರಿ, ಜ್ಯೋತಿ, ಪುಷ್ಪಲತಾ ಏಳುಭಾವಿ, ಸಾಹಿತಿ ಎ.ಎಂ. ಮದರಿ, ಜಿ.ಬಿ. ಪಾಟೀಲ್, ರವಿ ಕಾಂತನವರ, ಮಹಾದೇವಪ್ಪ ಮಾವಿನಮಡು, ಮೂಕಪ್ಪ ಮೇಸ್ತ್ರಿ ಬಸಾಪುರ, ಮಂಜುನಾಥ ಕವಲೂರು, ಸುಂಕಮ್ಮ ಪಡಚಿಂತಿ ಹಾಗೂ ಎನ್.ಕೆ.ಪಿ.ಎಂ ಹೈಸ್ಕೂಲ್ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ಅಡವಿಸೋಮಾಪುರದಲ್ಲಿ ಪಲ್ಸ್ ಪೋಲಿಯೋ ಜಾಥಾ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಅಡವಿಸೋಮಾಪೂರ ಗ್ರಾಮದ ಮತ್ತು ತಾಂಡೆಗಳ ಬೂತ್‌ಗಳಲ್ಲಿ ಪಲ್ಸ್ ಪೋಲಿಯೋ ದಿನದ ನಿಮಿತ್ತ ಜಾಥಾ ಹಮ್ಮಿಕೊಂಡು 5 ವರ್ಷದ ಒಳಗಿನ ಎಲ್ಲಾ ಮಕ್ಕಳಿಗೆ ಎರಡು ಹನಿ ಪೋಲಿಯೋ ಲಸಿಕೆಯನ್ನು ತಪ್ಪದೇ ಕೊಡಿಸಿ ಅಂಗವಿಕಲತೆ ತಡೆಗಟ್ಟೋಣ ಎಂದು ಜಾಗೃತಿ ಮೂಡಿಸಲಾಯಿತು.

ಆರೋಗ್ಯ ನಿರೀಕ್ಷಣಾಧಿಕಾರಿ ಶಿದ್ದಪ್ಪ ಎನ್.ಲಿಂಗದಾಳ ಮಾತನಾಡಿ, ಯಾವುದೇ ಕಾರ್ಯಕ್ರಮವು ಯಶಸ್ವಿಯಾಗಬೇಕಾದರೆ ಸಾರ್ವಜನಿಕರ ಸಹಕಾರ ಬಹು ಮುಖ್ಯವಾಗಿದೆ. ಸರ್ಕಾರಗಳು ಸಮುದಾಯದ ಆರೋಗ್ಯಕ್ಕೆ ಹೆಚ್ಚು ವೈದ್ಯಕೀಯ ಸೌಕರ್ಯಗಳನ್ನು ನೀಡುತ್ತಿದೆ. ಸೌಲಭ್ಯಗಳನ್ನು ಪಡೆದು ಆರೋಗ್ಯ ಸಂಪತ್ತನ್ನು ಪಡೆದುಕೊಳ್ಳಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯ ಡಿ.ಕೆ. ಕಲ್ಲೋಳ್ಳಿ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಸವಿತಾ ಪವಾರ, ಪೋಲಿಯೋ ಮೇಲ್ವಿಚಾರಕ ಎಸ್.ಬಿ. ಗಡಾದ, ಮಂಜುನಾಥ ದೊಡ್ಡಮನಿ, ಎಮ್.ಸಿ. ದೊಡ್ಡಮನಿ, ವ್ಹಿ.ವಾಯ್. ತಿರಕಣ್ಣವರ, ಬಿ.ಬಿ. ಹರ್ತಿ, ಮೀನಾಕ್ಷಿ ವಡ್ಡರ, ಮಾಲಾ ಮೇವುಂಡಿ, ರೇಣುಕಾ ಪುರದ, ಉಮಾದೇವಿ ಖಾನಾಪೂರ, ಲಲಿತಾ ನಾಯಕ, ಎಫ್.ಎನ್. ಅತ್ತಿಕಟ್ಟಿ, ಮಂಜುಳಾ ಆರಿ, ಲಲಿತಾ ಅಂಗಡಿ, ಶಿಕ್ಷಕಿಯರು, ಆಶಾ ಕಾರ್ಯಕರ್ತೆಯರು, ಆರೋಗ್ಯ ಇಲಾಖೆ ಸಿಬ್ಬಂದಿಗಳು ಭಾಗವಹಿಸಿದ್ದರು.

### ಭಾರತದ ಮೊದಲ ಮಹಿಳಾ ಐಎಎಸ್ ಅಧಿಕಾರಿ ಅಣ್ಣಾ ರಾಜಂ ಮಲ್ಹೋತ್ರಾ

# ಹೊಸ ಅಧ್ಯಾಯದ ಪುಟ ತೆರೆದ ದಿಟ್ಟೆ

1951ರ ಭಾರತ. ಅದಾಗಷ್ಟೇ ಪಡೆದ ಸ್ವಾತಂತ್ರ್ಯದ ಉತ್ಸಾಹದಲ್ಲಿದ್ದ ದೇಶ ತನ್ನ ಆಡಳಿತ ವ್ಯವಸ್ಥೆಯನ್ನು ಕಟ್ಟಿಕೊಳ್ಳುತ್ತಿದ್ದ ಸಮಯ. ಅಂದಿನ ಸರ್ಕಾರಿ ಕಚೇರಿಗಳಲ್ಲಿ ಮಹಿಳೆಯರು ಎಂದರೆ ಟೈಪಿಸ್ಟ್ ಅಥವಾ ಶಿಕ್ಷಕಿಯರೆಂಬ ಕಲ್ಪನೆ ಮಾತ್ರವಿತ್ತೇ ಹೊರತು, ಅದರಾಚೆ ಇನ್ನೇನೂ ಇರಲಿಲ್ಲ. ಆದರೆ, ಆ ಸಮಯದಲ್ಲಿ ಕೇರಳದ ಯುವತಿಯೊಬ್ಬಳು ಆ ಚೌಕಟ್ಟನ್ನು ಮುರಿದರು. ಅವರ ಹೆಸರು ಅಣ್ಣಾ ರಾಜಂ ಮಲ್ಹೋತ್ರಾ. ಅವರು ಭಾರತದ ಮೊದಲ ಮಹಿಳಾ ಐಎಎಸ್ ಅಧಿಕಾರಿಯಾಗಿ ಹೊಸ ಅಧ್ಯಾಯಕ್ಕೆ ನಾಂದಿ ಹಾಡಿದ ದಿಟ್ಟೆ, ಬುದ್ಧಿವಂತೆ.



ಅಣ್ಣಾ ರಾಜಂ 1927ರ ಜುಲೈ 17ರಂದು ಕೇರಳದ ನಿರಣಂ ಎಂಬ ಸುಂದರ ಹಳ್ಳಿಯಲ್ಲಿ ಜನಿಸಿದವರು. ಮನೆಯವರ ನಿರೀಕ್ಷೆ ಎಲ್ಲರಂತೆಯೇ ಇತ್ತು, 'ಹೆಣ್ಣುಮಕ್ಕಳು ಓದಬೇಕು, ಆದರೆ ಮಿತಿಯ ಚೌಕಟ್ಟಿನಾಚೆ ಹೆಜ್ಜೆಯೂರಬಾರದು' ಆದರೆ ಅಣ್ಣಾ ರಾಜಂ ಅವರಿಗೆ ಅದು ಸಾಲಲಿಲ್ಲ. ಅವರಿಗೆ ಇನ್ನೂ ಹೆಚ್ಚು ಕಲಿಯಬೇಕು, ದೇಶಕ್ಕಾಗಿ ಇನ್ನಷ್ಟು ಸೇವೆ ಮಾಡಬೇಕು ಎಂಬ ಆಸೆ. ಅವರು ಕ್ಯಾಲಿಕಟ್ನ ಮಾಲಬಾರ್ ಕ್ರಿಶ್ಚಿಯನ್ ಕಾಲೇಜಿನಿಂದ ಪದವಿ ಪಡೆದರು. ನಂತರ ಮದ್ರಾಸ್ ವಿಶ್ವವಿದ್ಯಾಲಯದಿಂದ ಇಂಗ್ಲಿಷ್ ಸಾಹಿತ್ಯದಲ್ಲಿ ಸ್ನಾತಕೋತ್ತರ ಪದವಿ ಮಾಡಿದರು. ಅಂದಿನ ಕಾಲದಲ್ಲಿ ಇದು ಮಹಿಳೆಯೊಬ್ಬಳ ಅತಿದೊಡ್ಡ ಸಾಧನೆ!

1951ರಲ್ಲಿ ಅವರು ಸಿವಿಲ್ ಸರ್ವಿಸ್ ಪರೀಕ್ಷೆ ಬರೆಯುವ ನಿರ್ಧಾರ ತೆಗೆದುಕೊಂಡರು. ಆ ಸಮಯದಲ್ಲಿ ಐಎಎಸ್ ಎನ್ನುವುದು ಪುರುಷರ ಕ್ಷೇತ್ರವೆಂದೇ ಪರಿಗಣಿಸಲಾಗುತ್ತಿತ್ತು. ಪರೀಕ್ಷೆಯೇ ಕಠಿಣ, ತರಬೇತಿಯೂ ಅಷ್ಟೇ ಕಠಿಣ. ಆದರೆ ಅಣ್ಣಾ ರಾಜಂ ಮಲ್ಹೋತ್ರಾ ಹೆದರಲಿಲ್ಲ. ಅವರು ಅಸಾಧಾರಣ ಶ್ರೇಣಿಯಲ್ಲಿ ಉತ್ತೀರ್ಣರಾದರು. ಆದರೆ ಸಂದರ್ಶನ ಮಂಡಳಿ ಅವರನ್ನು ತಡೆಯಲು ಪ್ರಯತ್ನಿಸಿತು. ಹೋರಾಟಗಳ ನಂತರ ಅವರನ್ನು ಮದ್ರಾಸ್ ಕೆಡರ್ಗೆ ನೇಮಿಸಲಾಯಿತು.

ಮೊದಲನೇ ಹುದ್ದೆಯಾಗಿ ತಿರುವಪ್ಪತ್ತೂರು ಸಬ್ ಕಲೆಕ್ಟರ್ ಹುದ್ದೆ ಅರಸಿಬಂತು. ಆ ಸಮಯದಲ್ಲಿ ಜಿಲ್ಲೆಯ ಆಡಳಿತ ಎಂದರೆ ಕಷ್ಟದ ಪ್ರದೇಶ, ಮೂಲಸೌಕರ್ಯಗಳ ಕೊರತೆಯ ಪ್ರತಿಬಿಂಬವೇ ಆಗಿತ್ತು. ಆದರೆ ಮಲ್ಹೋತ್ರಾ ಅಸಾಧ್ಯವೆನಿಸಿದ ಕೆಲಸಗಳನ್ನೂ ನಿಭಾಯಿಸಿದರು.

ಆ ಸಮಯದಲ್ಲಿ ಒಂದು ವಿಚಿತ್ರ ನಿಯಮ ಇತ್ತು. 'ಮದುವೆಯಾದರೆ ಸೇವೆಯಿಂದ ವಜಾ!' ಆದರೆ, ಮಲ್ಹೋತ್ರಾ ಆ ನಿಯಮವನ್ನು ವಿರೋಧಿಸಲಿಲ್ಲ. ನಂತರ ಅವರು ತಮ್ಮ ಬ್ಯಾಚ್ನ ಸಹ-ಅಧಿಕಾರಿ ಆರ್.ಎನ್. ಮಲ್ಹೋತ್ರ ಅವರನ್ನು ವಿವಾಹವಾದರು. ಅವರು ನಂತರ ಭಾರತದ ರಿಸರ್ವ್ ಬ್ಯಾಂಕ್ ಗವರ್ನರ್ ಆಗಿದ್ದರು. ಮಲ್ಹೋತ್ರ ಅವರು ನಾಲ್ಕು ದಶಕಗಳ ಕಾಲ ಆಡಳಿತ ಸೇವೆಯಲ್ಲಿ ಪ್ರಭಾವಶಾಲಿಯಾಗಿ ಕೆಲಸಮಾಡಿದರು. ಅವರು ಸಿ. ರಾಜಗೋಪಾಲಾಚಾರಿ, ಇಂದಿರಾ ಗಾಂಧಿ, ರಾಜೀವ್ ಗಾಂಧಿ ಮೊದಲಾದ ನಾಯಕರೊಂದಿಗೂ ಕೆಲಸ ಮಾಡಿದರು. ಅವರ ನಾಯಕತ್ವದಲ್ಲಿ ಜವಾಹರಲಾಲ್ ನೆಹರು ಪೋರ್ಟ್ ಟ್ರಸ್ಟ್ ಭಾರತದ ಅತ್ಯಾಧುನಿಕ ಹಾಗೂ ಪರಿಣಾಮಕಾರಿ ಪೋರ್ಟ್ ಆಗಿ ಬೆಳೆಯಿತು.

ಮಲ್ಹೋತ್ರಾ ಕೇವಲ ತಾವು ಮಾತ್ರ ಓದಿ ಉನ್ನತ ಹುದ್ದೆ ಅಲಂಕರಿಸಲಿಲ್ಲ. ತಮ್ಮಂತೆಯೇ ಸಾವಿರಾರು ಕನಸುಗಾರರಿಗೆ ಹೊಸ ಅವಕಾಶದ ಬಾಗಿಲು ತೆರೆದವರು. ಮಲ್ಹೋತ್ರಾ ಅವರ ಸೇವೆಯನ್ನು ಪುರಸ್ಕರಿಸಿ 1989ರಲ್ಲಿ ಭಾರತ ಸರ್ಕಾರ ಪದ್ಮಭೂಷಣ ಪ್ರಶಸ್ತಿಯನ್ನು ನೀಡಿ ಗೌರವಿಸಿತು.

2018ರಲ್ಲಿ, 91ನೇ ವಯಸ್ಸಿನಲ್ಲಿ ನಿಧನರಾದರು. ಇಂದು ಅವರಿಲ್ಲದಿದ್ದರೂ ಅವರ ಕಥೆ ಎಂದಿಗೂ ಜೀವಂತ. ಅವರು ಕೇವಲ ಅಧಿಕಾರಿಯಷ್ಟೇ ಅಲ್ಲ. ಮಹಿಳಾ ಶಕ್ತಿ, ಧೈರ್ಯ ಮತ್ತು ನಿಷ್ಠೆಯ ಜೀವಂತ ಪ್ರತೀಕ.

**– ಸತೀಶ್ ಭಟ್, ಮಾಗೋಡ್.**

# ಒತ್ತಡ ಮುಕ್ತ ಜೀವನಕ್ಕೆ ಧ್ಯಾನ ಸಹಕಾರಿ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಧ್ಯಾನವು ಅನಾದಿ ಕಾಲದಿಂದಲೂ ಆಚರಣೆಯಲ್ಲಿರುವ ಒಂದು ಪದ್ಧತಿಯಾಗಿದ್ದು, ಇದು ಮನಸ್ಸಿನ ಏಕಾಗ್ರತೆ ಹಾಗೂ ಶಾಂತತೆಗೆ ಸಹಕಾರಿಯಾಗಿದೆ ಎಂದು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗದೇವರು ಹೇಳಿದರು.

ಅವರು ಪಟ್ಟಣದ ಎಸ್‌ಜೆಜೆಎಂ ಸಂಯುಕ್ತ ಪದವಿ ಪೂರ್ವ ಮಾಹಾವಿದ್ಯಾಲಯದ ಆವರಣದಲ್ಲಿ ಅವ್ವ ಪ್ರತಿಷ್ಠಾನ, ನೆಹರು ಯುವ ಕೇಂದ್ರ, ಪತಂಜಲಿ ಯೋಗ ಸಮಿತಿ ಹಾಗೂ ವಿವಿಧ ಸಂಘ-ಸಂಸ್ಥೆಗಳ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ 2ನೇ ವಿಶ್ವ ಧ್ಯಾನ ದಿನಾಚರಣೆ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಭಾರತ ಪರಿಚಯಿಸಿದ ಧ್ಯಾನ ಹಾಗೂ ಯೋಗ ವಿಶ್ವಕ್ಕೆ ಮಾದರಿಯಾಗಿದೆ. ಪ್ರತಿಯೊಬ್ಬರೂ ನಿತ್ಯ ಯೋಗ, ಧ್ಯಾನವನ್ನು ಮಾಡುವುದರಿಂದ ಏಕಾಗ್ರತೆ ಹಾಗೂ ಮಾನಸಿಕ ಒತ್ತಡ ನಿವಾರಣೆಯಿಂದ ಮನಸ್ಸು ಉಲ್ಲಾಸಭರಿತವಾಗಿರಲು ಸಾಧ್ಯವಾಗುತ್ತದೆ. ಇದರಿಂದ ವಿದ್ಯಾರ್ಥಿಗಳು ಯಾವುದೇ ಒತ್ತಡವಿಲ್ಲದೆ ಅಭ್ಯಾಸದಲ್ಲಿ ತೊಡಗಿಕೊಳ್ಳಲು ಸಹಕಾರಿಯಾಗುತ್ತದೆ ಎಂದರು. ರುದ್ರಣ್ಣಾ ಗುಳಗುಳೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ನಿತ್ಯ ಒಂದು ಗಂಟೆ ಧ್ಯಾನ ಹಾಗೂ ಯೋಗಾಭ್ಯಾಸ ಮಾಡುವುದರಿಂದ ಒತ್ತಡದ ಬದುಕಿನಿಂದ ಹೊರಬರಲು ಸಾಧ್ಯವಾಗುತ್ತದೆ. ಪ್ರತಿಯೊಬ್ಬರೂ ಯೋಗ ಹಾಗೂ ಧ್ಯಾನ ಮಾಡುವುದು ಅವಶ್ಯಕ ಎಂದರು.

ಎಸ್.ಸಿ. ಬಡ್ನಿ, ಕೇಶವ ದೇವಾಂಗ್, ಶಿವಪ್ರಕಾಶ ಮಾಹಾಜನಶೆಟ್ರ, ಡಾ. ಎಸ್.ಸಿ. ಚವಡಿ, ಮಂಜುನಾಥ ಮಾಗಡಿ, ಧಶರಥ ಕೊಟೆಗೌಡ್ರ, ಪರಶುರಾಮ ವಂಟಕರ, ನಾಗರಾಜ ಸುರಣಗಿ, ವಿ.ಎಸ್. ನೀಲಗುಂದ, ಡಿ.ಎಸ್. ನೀಲಗುಂದ, ಮಂಜುನಾಥ ಮಟ್ಟಿ, ಪುನೀತ ಓಲೆಕಾರ, ಅನೂಪ ಕೆಂಚನಗೌಡರ, ಬಸವರಾಜ ಹಾರೋಗೇರಿ, ಗಿರೀಶ ಹುಲ್ಲೂರ, ರಾಜು ರಸಾಳಕರ, ಮಾಲಕ್ಕ ದಂದರಗಿ, ಶೈಲಾ ಆದಿ, ಶಶಿಕಲಾ ವಡಕಣ್ಣವರ, ಗೀತಾ ಜಾಧಾವ, ಶಾಂತಾ ಬೆನಕನ್ನವರ, ಹರ್ಷಲತಾ ದೇಶಪಾಂಡೆ, ಮಂಗಳಾ ನೀಲಗುಂದ, ನಾಗವೇಣಿ ನಾಯ್ಯರ, ಅಕ್ಕಮ್ಮಾ ನೀಲಗುಂದ, ಬ್ರಹ್ಮಕುಮಾರಿ ಶಿವಾನಿ ಅಕ್ಕ, ಶೋಭಾ ಪಾಟೀಲ ಯೋಗ ಶಿಕ್ಷಕ ಪ್ರಕಾಶ ಮದ್ದಿನ ಇದ್ದರು.

## 16 ಲಕ್ಷಕ್ಕೂ ಹೆಚ್ಚು ಕಾರ್ಮಿಕರನ್ನು 'ಮನರೇಗಾ' ಪಟ್ಟಿಯಿಂದ ಕೈಬಿಟ್ಟ ಕೇಂದ್ರ ಸರ್ಕಾರ: ವರದಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಯುಪಿಎ ಸರ್ಕಾರದ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (ಮನರೇಗಾ) ಹೆಸರನ್ನು ಬದಲಿಸಲು ಪ್ರಯತ್ನಿಸುವ 'ವಿಕ್ಷಿತ್ ಭಾರತ್ - ಗ್ಯಾರಂಟಿ ಫಾರ್ ರೋಜ್‌ಗಾರ್ ಮತ್ತು ಅಜೀವಿಕಾ ಮಿಷನ್ (ಗ್ರಾಮೀಣ) (ವಿಬಿ-ಜಿ ರಾಮ್ ಜಿ) ಮಸೂದೆ, 2025 ಅನ್ನು ಜಾರಿಗೆ ತರುವ ಕೇಂದ್ರ ಸರ್ಕಾರದ ಕ್ರಮದ ಕುರಿತು ಚರ್ಚೆ ತೀವ್ರಗೊಂಡಿದ್ದು, ಸರ್ಕಾರದ ಅಧಿಕೃತ ಅಂಕಿಅಂಶಗಳ ಪ್ರಕಾರ ಇತ್ತೀಚೆಗೆ 16.3 ಲಕ್ಷಕ್ಕೂ ಹೆಚ್ಚು ಕಾರ್ಮಿಕರನ್ನು ಮನರೇಗಾ ಪಟ್ಟಿಯಿಂದ ತೆಗೆದುಹಾಕಲಾಗಿದೆ ಎಂದು ರಾಷ್ಟ್ರೀಯ ಮಾಧ್ಯಮಗಳು ವರದಿ ಮಾಡಿವೆ.

ವರದಿ ಪ್ರಕಾರ, ಡಿಸೆಂಬರ್ 16 ರಂದು ಲೋಕಸಭೆಯಲ್ಲಿ ಮಸೂದೆಯನ್ನು ಪರಿಚಯಿಸುವ ಸರಿಸುಮಾರು ಒಂದು ತಿಂಗಳ ಮೊದಲು, 36 ದಿನಗಳ ಅವಧಿಯಲ್ಲಿ ಕಾರ್ಮಿಕರ ಹೆಸರು ಅಳಿಸಲಾಗಿದೆ ಎಂದು ಹೇಳಲಾಗಿದೆ. ಅಕ್ಟೋಬರ್ 10 ರಿಂದ ನವೆಂಬರ್ 14 ರವರೆಗಿನ ಅವಧಿಯನ್ನು ಒಳಗೊಂಡ ಈ ದತ್ತಾಂಶವು, ಗ್ರಾಮೀಣ ಕಾರ್ಮಿಕರನ್ನು ಉದ್ಯೋಗ ಖಾತರಿಪಡಿಸುವ ಕಾನೂನಿನಿಂದ ಹೊರಗಿಡುವ ಸಾಧ್ಯತೆಯ ಬಗ್ಗೆ ನೀತಿ ತಜ್ಞರಲ್ಲಿ ಕಳವಳ ಉಂಟುಮಾಡಿದೆ ಎಂದು ವರದಿಯಾಗಿದೆ.

## ಹೈಟೆಕ್ ಶೌಚಾಲಯ ಕಾಮಗಾರಿಗೆ ಭೂಮಿಪೂಜೆ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇತಿಹಾಸ ಪ್ರಸಿದ್ಧ ಲಕ್ಕುಂಡಿ ಗ್ರಾಮಕ್ಕೆ ಆಗಮಿಸುವ ಪ್ರವಾಸಿಗರ ಅನುಕೂಲಕ್ಕಾಗಿ ಇಲ್ಲಿಯ ಹಾಲಗೊಂಡ ಬಸವೇಶ್ವರ ಕೆರೆಯ ಪಕ್ಕದಲ್ಲಿ ಪ್ರವಾಸೋದ್ಯಮ ಇಲಾಖೆಯ ಅನುದಾನದಲ್ಲಿ ನಿರ್ಮಾಣವಾಗಲಿರುವ ಹೈಟೆಕ್ ಶೌಚಾಲಯ ಕಾಮಗಾರಿಗೆ ಗ್ರಾಮ ಪಂಚಾಯಿತಿ ಅಧ್ಯಕ್ಷ ಕೆ.ಎಸ್. ಪೂಜಾರ ಹಾಗೂ ಲಕ್ಕುಂಡಿ ಅಭಿವೃದ್ಧಿ ಪ್ರಾಧಿಕಾರದ ಉನ್ನತ ಮಟ್ಟದ ರಾಜ್ಯ ಸದಸ್ಯ, ಜಿ.ಪಂ ಮಾಜಿ ಅಧ್ಯಕ್ಷ ಸಿದ್ಧಲಿಂಗೇಶ್ವರ ಪಾಟೀಲ ಭೂಮಿಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಿದ್ಧಲಿಂಗೇಶ್ವರ ಪಾಟೀಲ, ಪ್ರವಾಸೋದ್ಯಮ ಇಲಾಖೆಯ 50 ಲಕ್ಷ ರೂ ಅನುದಾನದಲ್ಲಿ ಗ್ರಾಮದಲ್ಲಿ ಎರಡು ಹೈಟೆಕ್ ಶೌಚಾಲಯಗಳು ನಿರ್ಮಾಣವಾಗಲಿವೆ. ಒಂದು ಇಲ್ಲಿಯ ಪ್ರಸಿದ್ಧ ನನ್ನೇಶ್ವರ ಹಾಗೂ ಕಾಶಿ ವಿಶ್ವನಾಥ ಸ್ಮಾರಕಗಳನ್ನು ವಿಕ್ಷೀಸಲು ಆಗಮಿಸುವ ಪ್ರವಾಸಿಗರಿಗೆ ಅನುಕೂಲವಾಗುವ ದಿಸೆಯಲ್ಲಿ, ಇನ್ನೊಂದು ಪ್ರವಾಸಿಗರು ಹೋಗುವ ಮುಖ್ಯ ರಸ್ತೆಯ ಎಂ.ಕೆ.ಬಿ.ಎಸ್ ಶಾಲೆಯ ಹತ್ತಿರ ಹೈಟೆಕ್ ಶೌಚಾಲಯ ನಿರ್ಮಾಣವಾಗಲಿದೆ ಎಂದು ತಿಳಿಸಿದರು.

ಗ್ರಾ.ಪಂ ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಜಿ.ಪಂ ಮಾಜಿ ಸದಸ್ಯ ಎಸ್.ಬಿ. ಕಲಕೇರಿ, ಮುಖಂಡರಾದ ದತ್ತಾತ್ರೇಯ ಜೋಶಿ, ವೀರಯ್ಯ ಗಂಧದ, ಗ್ರಾ.ಪಂ ಸದಸ್ಯರಾದ ರುದ್ರಪ್ಪ ಮುಸ್ಕಿನಭಾವಿ, ಪೀರಸಾಬ ನದಾಫ್, ಕುಬೇರಪ್ಪ ಬೆಂತೂರ, ಮಹಾಂತೇಶ ಕಮತರ, ವಿರೂಪಾಕ್ಷಿ ಬೆಟಗೇರಿ, ರಜೀಯಾಬೇಗಂ ತಹಸೀಲ್ದಾರ. ಪಿ.ಡಿ.ಓ ಅಮೀರನಾಯಕ, ಎಂ.ಎ. ಗಾಜಿ ಇದ್ದರು.

# ವೀರಾಪೂರದಲ್ಲಿ ಆರೋಗ್ಯ ತಪಾಸಣೆ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ತಾಲೂಕಿನ ವೀರಾಪೂರ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಯ ಆವರಣದಲ್ಲಿ ಗ್ರಾಮಸ್ಥರ ಮನವಿಯ ಮೇರೆಗೆ ತಾಲೂಕು ಪಂಚಾಯಿತಿ ಗಜೇಂದ್ರಗಡ, ಗ್ರಾಮ ಪಂಚಾಯಿತಿ ರಾಂಪೂರ ಹಾಗೂ ಆರೋಗ್ಯ ಇಲಾಖೆ ಸಹಯೋಗದಲ್ಲಿ ಶನಿವಾರ ಉಚಿತ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿತ್ತು.

ಚಳಿಗಾಲದಲ್ಲಿ ಸಮತೋಲಿತ ಆಹಾರ ಸೇವನೆ, ನಿಯಮಿತ ವ್ಯಾಯಾಮ, ಸಾಕಷ್ಟು ನೀರು ಕುಡಿಯುವುದು, ಬೆಚ್ಚಗಿನ ಉಡುಪು ಧರಿಸಬೇಕು.

ಚಳಿಯಿಂದ ಚರ್ಮ ಒಣಗುವುದು ಮತ್ತು ತುರಿಕೆ ಸಾಮಾನ್ಯ. ನಿತ್ಯ ಸ್ನಾನ ಮಾಡಿ ಮೈಕೈ ಸ್ವಚ್ಛವಾಗಿಟ್ಟುಕೊಳ್ಳಬೇಕು ಎಂದು ವೈದ್ಯರು ತಿಳಿಸಿದರು.

ರೋಗದ ಲಕ್ಷಣ ಕಾಣುವ ಮುನ್ನವೇ ಆಗ್ಗಾಗ್ಗೆ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು. ಮಕ್ಕಳಿಗೆ ಈ ಸಮಯದಲ್ಲಿ ತಂಪು ಪಾನೀಯವನ್ನು ಕೊಡಬಾರದು. ಮಕ್ಕಳಿಗೆ ವಾತಾವರಣವನ್ನು ನಿರ್ಮಾಣ ಮಾಡಬೇಕು ಎಂದು ತಿಳಿಸಿದರು. ಶಿಬಿರದಲ್ಲಿ 60ಕ್ಕೂ ಹೆಚ್ಚು ಜನರು ಆರೋಗ್ಯ ತಪಾಸಣೆ ಮಾಡಿಸಿಕೊಂಡರು.

ಈ ಸಂದರ್ಭದಲ್ಲಿ ವೈದ್ಯಾಧಿಕಾರಿ ಡಾ. ಈರಣ್ಣ ಪಟ್ಟಣಶೆಟ್ಟಿ, ಸಮುದಾಯ ಆರೋಗ್ಯ ಅಧಿಕಾರಿ ಪಡಿಯಪ್ಪ ಮಾದರ, ಆರೋಗ್ಯ ಅಧಿಕಾರಿ ರೇಖಾ ಕಳ್ಳಿಮಠ, ಗ್ರಾ.ಪಂ ಅಧ್ಯಕ್ಷ ಶೇಖವ್ವ ಹನಮಪ್ಪ ಅಬ್ಬಿಗೇರಿ, ಸದಸ್ಯರಾದ ಶರಣಪ್ಪ ಆರ್ಯ, ಪಿಡಿಓ ಬಿ.ಎನ್. ಇಟಗಿಮಠ, ಕಾರ್ಯದರ್ಶಿ ಮಹೇಶ ಭಗವತಿ, ಗ್ರಾ.ಪಂ ಸಿಬ್ಬಂದಿಗಳು, ಗ್ರಾಮಸ್ಥರು ಇದ್ದರು.

## ತಮಿಳುನಾಡಿನಲ್ಲಿ 97 ಲಕ್ಷ, ಗುಜರಾತ್‌ನಲ್ಲಿ 73 ಲಕ್ಷ ಹೆಸರು ಡಿಲೀಟ್

■ವಿಜಯಸಾಕ್ಷಿ ಸುದ್ದಿ, ಚೆನ್ನೈ

ಎಸ್‌ಐಆರ್ ಬಳಿಕ ಕರಡು ಮತದಾರರ ಪಟ್ಟಿ ಪ್ರಕಟ : ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಬಳಿಕ ತಮಿಳುನಾಡು ಮತ್ತು ಗುಜರಾತ್‌ನ ಕರಡು ಮತದಾರರ ಪಟ್ಟಿಯನ್ನು ಭಾರತೀಯ ಚುನಾವಣಾ ಆಯೋಗ (ಇಸಿಐ) ಪ್ರಕಟಿಸಿದ್ದು, ಕ್ರಮವಾಗಿ 97.3 ಮತ್ತು 73.7 ಲಕ್ಷ ಮತದಾರರ ಹೆಸರುಗಳನ್ನು ತೆಗೆದುಹಾಕಿದೆ.

ತಮಿಳುನಾಡಿನಲ್ಲಿ ಕೈಬಿಡಲಾದ 97 ಲಕ್ಷ ಹೆಸರುಗಳಲ್ಲಿ 66.4 ಲಕ್ಷ ಜನರು ತಮ್ಮ ವಾಸಸ್ಥಳಗಳನ್ನು ಬದಲಾಯಿಸಿದ್ದಾರೆ, 26.9 ಲಕ್ಷ ಜನರು ಸಾವನ್ನಪ್ಪಿದ್ದಾರೆ ಮತ್ತು 3.9 ಲಕ್ಷ ಜನರ ಹೆಸರುಗಳು ಒಂದಕ್ಕಿಂತ ಹೆಚ್ಚು ಬಾರಿ ದಾಖಲಾಗಿತ್ತು ಎಂದು ಚುನಾವಣಾ ಆಯೋಗ ಹೇಳಿದೆ.

ಹೆಸರು ತೆಗೆದು ಹಾಕಲಾದ ಜನರು ತಮ್ಮ ಆಕ್ಷೇಪಣೆಗಳನ್ನು ಸಲ್ಲಿಸಿ ಹೆಸರು ಸೇರ್ಪಡೆಗೆ ಜನವರಿ 18ರವರೆಗೆ ಅವಕಾಶ ನೀಡಲಾಗಿದೆ.

ಚುನಾವಣಾ ಆಯೋಗ ಪ್ರಕಟಿಸಿರುವ ತಮಿಳುನಾಡಿನ ಕರಡು ಮತದಾರರ ಪಟ್ಟಿಯಲ್ಲಿ 2.6 ಕೋಟಿ ಪುರುಷರು ಮತ್ತು 2.7 ಕೋಟಿ ಮಹಿಳಾ ಮತದಾರರಿದ್ದಾರೆ ಎಂದು ವರದಿಗಳು ಹೇಳಿವೆ.

ಚೆನ್ನೈ ನಗರದ ಸುಮಾರು 14.2 ಲಕ್ಷ ಮತದಾರರ ಹೆಸರುಗಳನ್ನು ಕರಡು ಪಟ್ಟಿಯಿಂದ ತೆಗೆದುಹಾಕಲಾಗಿದ್ದು, ಇದರಿಂದ ಅತಿ ಹೆಚ್ಚು , ಅಂದರೆ ಶೇಕಡ 35ರಷ್ಟು ಮತದಾರರ ಪ್ರಮಾಣ ಕಡಿಮೆಯಾಗಿದೆ ವರದಿಗಳು ವಿವರಿಸಿವೆ.

## ಹರ್ಲಾಪೂರ ಮಠದಲ್ಲಿ ಶಿವಾನುಭವ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಸಮೀಪದ ಹರ್ಲಾಪೂರ ಕೊಟ್ಟೂರೇಶ್ವರ ಮಠದಲ್ಲಿ 312ನೇ ಶಿವಾನುಭವ ಕಾರ್ಯಕ್ರಮ ನೆರವೇರಿತು.

ಸಾನ್ನಿಧ್ಯ ವಹಿಸಿದ್ದ ಡಾ. ಕೊಟ್ಟೂರೇಶ್ವರ ಮಹಾಸ್ವಾಮಿಗಳು ಶಿವಾನುಭವದ ಕುರಿತು ಆಶೀರ್ವಚನ ನೀಡಿದರು. ನಂತರ ಗದಗ ತಾಲೂಕಿನ ನೂತನ ನೋಟರಿಯಾಗಿ ಆದೇಶ ಪಡೆದ ವಕೀಲ ಸುರೇಶ ಬಿಸನಳ್ಳಿ ಅವರನ್ನು ಸನ್ಮಾನಿಸಲಾಯಿತು.

ಕೆ.ಬಿ. ವೀರಾಪೂರ, ಮಂಜುನಾಥ ಅರ್ಕಸಾಲಿ ಸಂಗೀತ ಸೇವೆ ನೀಡಿದರು. ಡಾ. ಎಸ್.ಸಿ. ಸರ್ವಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಮಹಾದೇವಪ್ಪ ಲಕ್ಕುಂಡಿ, ಶರಣಪ್ಪ ಡೋಣಿ, ಕೊಟ್ರಯ್ಯ ಮಜ್ಜಿಗುಡ್ಡ, ರಾಮಣ್ಣ ಬೆಳಧಡಿ, ಮಹಾದೇವಪ್ಪ ಯಾಳವಾಡ ಉಪಸ್ಥಿರಿದ್ದರು. ವೆಂಕಟೇಶ ಜುಂಜಣಿ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು.

# ಅಗ್ನಿ ಅವಘಡಗಳ ಜಾಗೃತಿ ಅಣುಕು ಪ್ರದರ್ಶನ



■ವಿಜಯಸಾಕ್ಷಿ ಸುದ್ದಿ, ಗದಗ

ಸ್ಥಳೀಯ ಜಗದ್ಗುರು ತೋಂಟ-ದಾರ್ಯ ವಿದ್ಯಾಪೀಠದ ಬಸವೇಶ್ವರ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯದ 2025-2026ನೇ ಸಾಲಿನ ಎನ್.ಎಸ್.ಎಸ್ ವಾರ್ಷಿಕ ವಿಶೇಷ ಶಿಬಿರವನ್ನು ದತ್ತು ಗ್ರಾಮ ಹಾತಲಗೇರಿಯಲ್ಲಿ ಹಮ್ಮಿಕೊಳ್ಳಲಾಗಿತ್ತು.

ಶಿಬಿರದ 2ನೇ ದಿನದ ಕಾರ್ಯಕ್ರಮದಲ್ಲಿ ಗದಗ ಜಿಲ್ಲಾ ಅಗ್ನಿ ಶಾಮಕದಳದ ಅಧಿಕಾರಿಗಳಾದ ವಿ.ಎಸ್. ಠಕ್ಕೇಕರ ಹಾಗೂ ಸಿಬ್ಬಂದಿ ವರ್ಗದವರಿಂದ ಅಗ್ನಿ ಅವಘಡ ಮತ್ತು ಅವುಗಳ ತುರ್ತು ನಿರ್ವಹಣೆ ಕುರಿತು ಅಣುಕು ಪ್ರದರ್ಶನದ ಮೂಲಕ ಜಾಗೃತಿ ಮೂಡಿಸಿದರು. ಹಾತಲಗೇರಿ ಗ್ರಾಮದ ಅಸಂಖ್ಯಾತ ಜನರು, ಪ್ರಾಥಮಿಕ ಮತ್ತು ಪ್ರೌಢಶಾಲೆಯ ವಿದ್ಯಾರ್ಥಿಗಳು ಈ ಸಮಾರಂಭದ ಸದುಪಯೋಗ ಪಡೆದರು. ಸಾಯಂಕಾಲ ಗದುಗಿನ ನ್ಯಾಯವಾದಿಗಳಾದ ಎಂ.ಜಿ. ಮುಲ್ಲಾ ಕಾನೂನು ಅರಿವು-ನೆರವು ವಿಷಯದ ಕುರಿತು ಮಾತನಾಡಿ, ಮಾನವ ಹಕ್ಕುಗಳ ಸಂರಕ್ಷಣೆಯಲ್ಲಿ ಇರುವ ವಿವಿಧ ಕಾನೂನುಗಳನ್ನು ಪರಿಚಯಿಸಿದರು. ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಪಿ.ಎಲ್.ಡಿ ಬ್ಯಾಂಕಿನ ಮಾಜಿ ಅಧ್ಯಕ್ಷ ರಾಮಣ್ಣ ಹೂವಣ್ಣವರ ಮಾತನಾಡಿ, ಶಿಬಿರದ ಉದ್ದೇಶಗಳನ್ನು ತಿಳಿಸಿದರು. ಜಾನಪದ ಕಲಾವಿದ ಶಿವಪ್ಪ ಡೊಳ್ಳಿನ ಸಾಂಸ್ಕೃತಿಕ ಕಾರ್ಯಕ್ರಮಗಳ ಮೂಲಕ ಎಲ್ಲರನ್ನು ರಂಜಿಸಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಗ್ರಾ.ಪಂ ಸದಸ್ಯರಾದ ಈರಪ್ಪ ಸತ್ಯಪ್ಪ ಬೇಲೇರಿ, ವಿಠ್ಠಲ ಬೆಂತೂರ, ಮಾಜಿ ಸೈನಿಕ ಅಜ್ಜಪ್ಪ ಅಬ್ಬಿಗೇರಿ, ಯುವ ಮುಖಂಡ ಸಂತೋಷ ಪೂಜಾರ, ಗೋವಿಂದಗೌಡ ಪಾಟೀಲ, ಪುರುಷೋತ್ತಮ ಪೂಜಾರ ವೇದಿಕೆಯ ಮೇಲೆ ಉಪಸ್ಥಿತರಿದ್ದರು. ಆರ. ಎಸ್. ಹಿರೇಮಠ ಸ್ವಾಗತಿಸಿದರು. ಕುಮಾರ ನಾಗೇಶ ತಾಳಿ ಕಾರ್ಯಕ್ರಮ ನಿರೂಪಿಸಿದರು. ಎನ್.ಎಸ್.ಎಸ್ ಅಧಿಕಾರಿ ಪ್ರೊ. ಎಂ.ಬಿ. ಶಿರುಂದ ವಂದಿಸಿದರು.

# ಮನರೇಗಾ ಮರುನಾಮಕರಣಕ್ಕೆ ವಿರೋಧ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಮನರೇಗಾ ಯೋಜನೆಯ ಹೆಸರು ಬದಲಾವಣೆ ಮಾಡಿ ಕೇಂದ್ರ ಸರಕಾರ ಗಾಂಧೀಜಿ ವಿರುದ್ಧ ತನ್ನ ದ್ವೇಷವನ್ನು ಹೊರಹಾಕಿದ್ದಲ್ಲದೆ ಬಡ ಕಾರ್ಮಿಕರಿಗೆ ಅನ್ಯಾಯ ಮಾಡಿದೆ. ಇದು ದ್ವೇಷ ರಾಜಕಾರಣದ ಭಾಗ ಎಂದು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ರಾಜ್ಯಾಧ್ಯಕ್ಷ, ವಕೀಲ ತಾಹೇರ್ ಹುಸೇನ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಕಳೆದ 20 ವರ್ಷಗಳಿಂದ ಕೇಂದ್ರ ಸರ್ಕಾರದ ಮಹತ್ತರ ಯೋಜನೆಯಾದ ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆ ಗ್ರಾಮೀಣ ಭಾಗದ ಕೂಲಿ ಕಾರ್ಮಿಕರ ಜೀವನಕ್ಕೆ ಭದ್ರತೆ ಒದಗಿಸಿದೆ. ಆದರೆ ಈಗಿನ ಕೇಂದ್ರ ಸರ್ಕಾರ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಹೆಸರಿನಲ್ಲಿರುವ ಮಹಾತ್ಮ ಗಾಂಧಿ ಅವರ ಹೆಸರನ್ನು ತೆಗೆದುಹಾಕಿ ವಿಕಸಿತ ಭಾರತ ಗ್ರಾಮೀಣ ಉದ್ಯೋಗ ಖಾತರಿ ಮತ್ತು ಜೀವನೋಪಾಯ ಯೋಜನೆ (ವಿಬಿ ಜಿ-ರಾಮ್-ಜಿ) ಎಂದು ಮರುನಾಮಕರಣ ಮಾಡಿ, ಮಹಾತ್ಮ ಗಾಂಧಿಯವರಿಗೆ ಅವಮಾನ ಮಾಡಿದೆ.

ಈ ಬದಲಾವಣೆಯಿಂದ ಸುಮಾರು 1 ಕೋಟಿಗೂ ಅಧಿಕ ಬಡ ಕಾರ್ಮಿಕರಿಗೆ ಅನ್ಯಾಯವಾಗುತ್ತದೆ. ಕೇಂದ್ರ ಸರ್ಕಾರದ ಈ ಧೋರಣೆ ಅಮಾನವೀಯವಾಗಿದೆ ಎಂದು ಅವರು ವಿರೋಧ ವ್ಯಕ್ತಪಡಿಸಿದ್ದಾರೆ.

# ಕ್ಷೇತ್ರದ ಅಭಿವೃದ್ಧಿ ಕುರಿತು ಶಾಸಕ ಡಾ. ಲಮಾಣಿ ಪ್ರಸ್ತಾಪ

▶▶ಮೊದಲನೇ ಪುಟದಿಂದ

ನೀರನ್ನು ಒದಗಿಸುವ ಬಹುಗ್ರಾಮ ಯೋಜನೆಯ ಕಾಮಗಾರಿಯನ್ನು ತ್ವರಿತಗೊಳಿಸಿ ಜನರ ನೀರಿನ ಸಮಸ್ಯೆ ಬಗೆಹರಿಸಬೇಕು ಎಂದು ಸಚಿವರು ಹಾಗೂ ಅಧಿಕಾರಿಗಳಿಗೆ ಮನವಿ ಮಾಡಿದರೂ ಸ್ಪಂದನೆ ಸಿಕ್ಕಿಲ್ಲ ಎಂದು ಗ್ರಾಮೀಣಾಭಿವೃದ್ಧಿ ಪಂಚಾಯತರಾಜ್ ಇಲಾಖೆಯ ಬಗ್ಗೆ ಬೇಸರ ವ್ಯಕ್ತಪಡಿಸಿ ಕೂಡಲೇ ಇದರ ಬಗ್ಗೆ ಗಮನ ಹರಿಸುವಂತೆ ಆಗ್ರಹಿಸಿದರು.

## 8 ವರ್ಷಗಳ ಹಿಂದೆಯೇ ಹಕ್ಕುಪತ್ರ ಪಡೆದರೂ ನಿವೇಶನ ಯಾವುದೆಂದೇ ಗೊತ್ತಿಲ್ಲ

# ಗುಡಿಸಲಾದರೂ ಕಟ್ಟಿಕೊಳ್ಳುತ್ತೇವೆ, ನಿವೇಶನ ಗುರುತಿಸಿಕೊಡಿ!

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

8 ವರ್ಷಗಳ ಹಿಂದೆ ಆಶ್ರಯ ನಿವೇಶನ ಹಕ್ಕುಪತ್ರ ಪಡೆದಿದ್ದರೂ ಇದುವರೆಗೂ ತಮ್ಮ ಹೆಸರಿನ ನಿವೇಶನ ಗುರುತಿಸಿಕೊಡದೇ ಇರುವುದಕ್ಕೆ ಅಸಮಾಧಾನಗೊಂಡ ಫಲಾನುಭವಿಗಳು ಶನಿವಾರ ಪುರಸಭೆಗೆ ದೌಡಾಯಿಸಿ 8 ದಿನಗಳಲ್ಲಿ ಫಲಾನುಭವಿಗಳಿಗೆ ನಿವೇಶನ ಗುರುತಿಸಿಕೊಡಬೇಕು ಮತ್ತು ಅಲ್ಲಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿಕೊಡಬೇಕು. ಇಲ್ಲದಿದ್ದರೆ ಪುರಸಭೆಯ ಮುಂದೆ ಧರಣಿ ಸತ್ಯಾಗ್ರಹ ನಡೆಸಲಾಗುತ್ತದೆ ಎಂದು ಮನವಿ ಸಲ್ಲಿಸಿದರು.

ಈ ವೇಳೆ ತಮ್ಮ ಅಳಲು ತೋಡಿಕೊಂಡ ಕವಿತಾ ಪಾಟೀಲ, ದೀಪಾ ಕುಂದಗೋಳ ಮಾತನಾಡಿ, ಪಟ್ಟಣದ ಪುರಸಭೆ ವ್ಯಾಪ್ತಿಯ ತಮ್ಮಾ-ತಿಮ್ಮಿ ಗುಡ್ಡದಲ್ಲಿ 2018ರಲ್ಲಿಯೇ 438 ಫಲಾನುಭವಿಗಳಿಗೆ ನಗರ ನಿವೇಶನ ಯೋಜನೆಯಡಿ ಹಕ್ಕುಪತ್ರ ನೀಡಿದ್ದಾರೆ. ಅಂದಿನಿಂದ ಇವತ್ತಿನವರೆಗೂ ನಮ್ಮ ನಿವೇಶನ ಗುರುತಿಸಿಕೊಟ್ಟಿಲ್ಲ ಮತ್ತು ಅಲ್ಲಿ ಯಾವುದೇ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವ ಕೆಲಸ ಮಾಡುತ್ತಿಲ್ಲ. ನಮ್ಮ ಜಾಗ ಯಾವುದೆಂದು ಗೊತ್ತಿಲ್ಲದಿದ್ದರೂ ಅನೇಕ ವರ್ಷಗಳಿಂದ ಪುರಸಭೆಗೆ ಟ್ಯಾಕ್ಸ್ ಕಟ್ಟುತ್ತಾ ಬಂದಿದ್ದೇವೆ. ಹಕ್ಕುಪತ್ರ ಪಡೆದು ಸ್ವಂತ ಸೂರಿನ ಕನಸು ಕಾಣುತ್ತಲೇ ಬಾಡಿಗೆ ಮನೆಯಲ್ಲಿ ವಾಸಿಸುತ್ತಿದ್ದೇವೆ. ನಮ್ಮ ಬೇಡಿಕೆಗಾಗಿ ಕಳೆದ ಹಲವಾರು ವರ್ಷಗಳಿಂದ ಎಲ್ಲ ಫಲಾನುಭವಿಗಳು ಸೇರಿ ಮುಖ್ಯಮಂತ್ರಿಗಳಾದಿಯಾಗಿ ಎಲ್ಲ ರಾಜಕಾರಣಿಗಳಿಗೆ, ಅಧಿಕಾರಿಗಳಿಗೆ ಕೈ-ಕಾಲು ಮುಗಿದು ಕೇಳಿಕೊಳ್ಳುತ್ತಾ ಬಂದಿದ್ದರೂ ಯಾವುದೇ ಪ್ರಯೋಜನವಾಗಿಲ್ಲ. ನಮ್ಮ ನಿವೇಶನ ಗುರುತಿಸಿ ಸೌಲಭ್ಯ ಕಲ್ಪಿಸಿಕೊಟ್ಟರೆ ಗುಡಿಸಲು ಕಟ್ಟಿಕೊಂಡಾದರೂ ಬದುಕುತ್ತೇವೆ. ಇನ್ನಾದರೂ ಸಂಬಂಧಪಟ್ಟವರು ನಮ್ಮ ಗೋಳು ಕೇಳಬೇಕು ಎಂದು ವಿನಂತಿಸಿದರು.



ಕರವೇ ಮುಖಂಡ ಪ್ರಕಾಶ ಕೊಂಚಿಗೇರಿಮಠ, ಸಂಗೊಳ್ಳಿ ರಾಯಣ್ಣ ವೇದಿಕೆ ಅಧ್ಯಕ್ಷ ಬಸವರಾಜ ಹಿರೇಮನಿ, ಸುರೇಶ ಹಟ್ಟಿ, ಮಂಜುನಾಥ ಮುಳಗುಂದ, ಮಂಜು ಸುತಾರ ಮಾತನಾಡಿ, ಪಟ್ಟಣದಿಂದ ದೂರ ಇರುವ, ಜನವಸತಿಗೆ ಯೋಗ್ಯವಲ್ಲದ ಮತ್ತು ಸಂಪರ್ಕ ರಸ್ತೆಯೂ ಇಲ್ಲದ ನಿರ್ಜನವಾದ ಗುಡ್ಡದ ಪ್ರದೇಶದಲ್ಲಿ ಆಶ್ರಯ ನಿವೇಶನಕ್ಕೆ ಭೂಮಿ ಖರೀದಿಸಿದ್ದೇ ದೊಡ್ಡ ತಪ್ಪಾಗಿದೆ. ಇನ್ನು 8 ವರ್ಷಗಳ ಹಿಂದೆ ಹಕ್ಕುಪತ್ರ ನೀಡಿದ್ದರೂ ಅಲ್ಲಿ ಮೂಲಭೂತ ಸೌಲಭ್ಯ ಕಲ್ಪಿಸಿಲ್ಲ ಮತ್ತು ಫಲಾನುಭವಿಗಳಿಗೆ ನಿವೇಶನ ಗುರುತಿಸಿಕೊಟ್ಟಿಲ್ಲ. 8 ದಿನಗಳಲ್ಲಿ ಫಲಾನುಭವಿಗಳ ಬೇಡಿಕೆಗಳಿಗೆ ಸ್ಪಂದಿಸದಿದ್ದರೆ ಫಲಾನುಭವಿಗಳೊಂದಿಗೆ ಅನೇಕ ಸಂಘಟನೆಗಳು ಪುರಸಭೆಯ ಮುಂದೆ ಪ್ರತಿಭಟನೆ ಕೈಗೊಳ್ಳುತ್ತೇವೆ ಎಂದರು.

ಈ ವೇಳೆ ಫಲಾನುಭವಿಗಳಾದ ಪಲ್ಲವಿ ಹಿರೇಮಠ, ರೇವತಿ ಕಟ್ಟಿಮನಿ, ಶಿವಲೀಲಾ ಹಿಪ್ಪರಗಿ, ಶೋಭಾ ಕಮತದ, ಸುಶಿಲವ್ವ ಹಿರೇಮಠ, ನಿರ್ಮಲಾ ಬೆಳದಡಿ, ದ್ರಾಕ್ಷಾಯಣಿ ಮಲ್ಲಸಮುದ್ರ, ಶ್ಯಾಮಿನಾ ನದಾಫ್, ಸುಶೀಲಾ ಪಾಟೀಲ, ಲಲಿತಾ ಆರೇರ, ಪ್ರೇಮಾ ಮೇದೂರ, ಮಾದೇವಕ್ಕ ಗೂಡೂರ, ಜಮೀನಾ ಬೇಗಂ ಮುಂತಾದವರು ಇದ್ದರು.

ಮನವಿ ಪತ್ರ ಸ್ವೀಕರಿಸಿದ ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ, ತಮ್ಮಾ-ತಿಮ್ಮಿ ಗುಡ್ಡದ ಹತ್ತಿರ 16 ಎಕರೆ ಜಮೀನಿನಲ್ಲಿ 648 ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ. ಅದರಲ್ಲಿ 438 ಫಲಾನುಭವಿಗಳಿಗೆ ಹಕ್ಕುಪತ್ರ ವಿತರಣೆ ಮಾಡಲಾಗಿದೆ. ನಿವೇಶನಕ್ಕೆ ಸಂಪರ್ಕ ರಸ್ತೆ ಕಲ್ಪಿಸುವ ಪ್ರಕ್ರಿಯೆ ನಡೆದಿದೆ. ಕಚ್ಚಾ ರಸ್ತೆ-ಗಟಾರು ನಿರ್ಮಿಸಿ ಕಲ್ಲು ನೆಡಲಾಗಿದೆ. ಶಾಸಕರೊಂದಿಗೆ ಚರ್ಚಿಸಿ ಕುಡಿಯುವ ನೀರು, ವಿದ್ಯುತ್ ಸೌಲಭ್ಯ, ರಸ್ತೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಿ ನಿವೇಶನ ಗುರುತಿಸಿಕೊಡಲಾಗುತ್ತದೆ ಎಂದರು.

# ಕಡಲೆ ಬೆಳೆಯಲ್ಲಿ ಪೋಷಕಾಂಶ ನಿರ್ವಹಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಪ್ರಸ್ತುತ ಕಡಲೆ ಬೆಳೆ ಹೂವಾಡುವ ಹಂತದಿಂದ ಕಾಯಿ ಕಟ್ಟುವ ಹಂತದವರೆಗಿದೆ. ಬಹಳಷ್ಟು ಕಡೆಗಳಲ್ಲಿ ಪೋಷಕಾಂಶಗಳ ಕೊರತೆಯಿಂದ ಸದರಿ ಬೆಳೆಯು ಹಳದಿ ಹಾಗೂ ಕೆಂಪು ಬಣ್ಣಕ್ಕೆ ತಿರುಗಿ ಒಣಗಿದ ಹಾಗೆ ತಾಕಿನಲ್ಲಿ ಕಾಣಸಿಗುತ್ತಿದೆ.

ಪೋಷಕಾಂಶಗಳ ಕೊರತೆಯಿಂದ ಬೆಳೆಯ ಬೆಳವಣಿಗೆ ಕುಂಠಿತವಾಗಿ, ಇಳುವರಿ ಕಡಿಮೆಯಾಗುವ ಸಂಭವವಿರುತ್ತದೆ. ರೈತರು ತಮ್ಮ ಹತ್ತಿರದ ರೈತ ಸಂಪರ್ಕ ಕೇಂದ್ರದಲ್ಲಿ ರಿಯಾಯಿತಿ ದರದಲ್ಲಿ ಲಭ್ಯವಿರುವ ದ್ರವರೂಪದ ಲಘುಪೋಷಕಾಂಶಗಳ ಮಿಶ್ರಣವನ್ನು (2ಮಿ.ಲೀ./ಲೀ.) ಶಿಫಾರಸ್ಸಿಗನುಗುಣವಾಗಿ ಬೆಳೆಗೆ ಸಿಂಪಡಿಸಿದಲ್ಲಿ, ಎಲ್ಲ ಪೋಷಕಾಂಶಗಳು ಬೆಳೆಗೆ ಒದಗಿ, ಬೆಳೆಯು ಸಮೃದ್ಧವಾಗಿ, ಇಳುವರಿಯು ಉತ್ತಮವಾಗಿರುತ್ತದೆ ಎಂದು ಗದಗ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರಾದ ಚೇತನಾ ಪಾಟೀಲ ತಿಳಿಸಿದ್ದಾರೆ.

ಬೆಳೆಗೆ ಬೇಕಾದ ಬೋರೋನ್ ಮೂಲದ ಪೋಷಕಾಂಶವನ್ನು ಶಿಫಾರಸ್ಸಿನನ್ವಯ ದ್ರವರೂಪದ ಕರ್ನೋರ್ಷಿಯಾದ ಜೊತೆಗೆ (2ಮಿ.ಲೀ./ಲೀ.) ಸಿಂಪರಣೆ ಮಾಡಿದಲ್ಲಿ, ಚೆನ್ನಾಗಿ ಹೂವು ಹಿಡಿದು, ಕಾಯಿ ಕಟ್ಟಿ, ಗುಣಮಟ್ಟದ ಉತ್ಪಾದನೆಗೆ ಸಹಕಾರಿಯಾಗುತ್ತದೆ. ಸದರಿ ಎಲ್ಲ ಪೋಷಕಾಂಶಗಳು ಕೃಷಿ ಇಲಾಖೆಯ ರೈತ ಸಂಪರ್ಕ ಕೇಂದ್ರಗಳಲ್ಲಿ ರಿಯಾಯಿತಿ ದರದಲ್ಲಿ ಲಭ್ಯವಿದ್ದು, ಜಿಲ್ಲೆಯ ಎಲ್ಲ ರೈತರು ಅವುಗಳ ಉಪಯೋಗ ಪಡೆಯುವಂತೆ ಜಂಟಿ ಕೃಷಿ ನಿರ್ದೇಶಕರು ಮನವಿ ಮಾಡಿದ್ದಾರೆ.



## ಕೊಪ್ಪಳ ಜಿಲ್ಲಾ ಮಹಿಳಾ ಕಾಂಗ್ರೆಸ್‌ನಿಂದ ಪ್ರಥಮ ಬಾರಿಗೆ ಅಧಿವೇಶನ ವೀಕ್ಷಣೆ

# ಸರಕಾರದ ಸಾಧನೆ ವಿವರಿಸುವ ಕೆಲಸ ಮಾಡಿ



■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಜಿಲ್ಲಾ ಮಹಿಳಾ ಕಾಂಗ್ರೆಸ್‌ನಿಂದ ಪ್ರಥಮ ಬಾರಿಗೆ ಬೆಳಗಾವಿ ಚಳಿಗಾಲದ ಅಧಿವೇಶನ ವೀಕ್ಷಣೆ ಮಾಡಲು ತೆರಳಿದ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ ಎಸ್.ತಂಗಡಗಿ ಮಹಿಳಾ ಮುಖಂಡರನ್ನು ಭೇಟಿ ಮಾಡಿ ಕುಶಲೋಪರಿ ವಿಚಾರಿಸಿದರು. ಅಧಿವೇಶನ ವೀಕ್ಷಣೆಗೆ ಅವಕಾಶ ಮಾಡಿಕೊಟ್ಟು, ಮುಂದೆ ಮಹಿಳೆಯರಿಗೆ ಇಲ್ಲೇ ಕುಳಿತು ಮಾತನಾಡುವ ಅವಕಾಶ ಸಿಗುತ್ತದೆ. ಶೇ. 33 ಮೀಸಲು ಬಂದರೆ 75 ಮಹಿಳಾ ಶಾಸಕರು ಸದನದಲ್ಲಿ ಇರುತ್ತೀರಿ, ಮಹಿಳಾ ಕಾಂಗ್ರೆಸ್‌ನ ವಿನೂತನ ಕಾರ್ಯ ಮೆಚ್ಚುವಂಥದ್ದು. ಸರಕಾರದ ವಿವಿಧ ಯೋಜನೆಗಳ ಮಾಹಿತಿಯನ್ನು ಜನರಿಗೆ ಮುಟ್ಟಿಸುವ ಕೆಲಸ ಜೊತೆಗೆ ಸರಕಾರದ ಸಾಧನೆ ವಿವರಿಸುವ ಕೆಲಸ ಮಾಡಿ ಎಂದರು.

ಈ ವೇಳೆ ವೀಕ್ಷಣೆಗೆ ತೆರಳಲು ಅವಕಾಶ ಮಾಡಿಕೊಟ್ಟ ಶಾಸಕ ಕೆ. ರಾಘವೇಂದ್ರ ಹಿಟ್ನಾಳ ಭೇಟಿಯಾಗಿ ಶುಭ ಕೋರಿದರು. ಕಾಂಗ್ರೆಸ್ ಜಿಲ್ಲಾ ಅಧ್ಯಕ್ಷ ಅಮರೇಗೌಡ ಬಯ್ಯಾಪೂರ ವಿನೂತನ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿ ಸಹಕಾರ ನೀಡಿದರು. ಡಿಸಿಸಿ ಸದಸ್ಯೆ ಸುಮಂಗಲಾ ನಾಯಕ, ಡಿಎಂಸಿ ಸದಸ್ಯೆ ದೀಪಾ ರಾಠೋಡ, ಆರೋಗ್ಯ ಇಲಾಖೆ ಡಿಐಎಂಸಿ ಸದಸ್ಯೆ ರೇಷ್ಮಾ ಖಾಜಾವಲಿ, ಕಾರಟಗಿ ಬ್ಲಾಕ್ ಅಧ್ಯಕ್ಷೆ ಸೌಮ್ಯ ಕಂದಗಲ್, ಕುಷ್ಟಗಿ ಬ್ಲಾಕ್ ಅಧ್ಯಕ್ಷೆ ಶಕುಂತಲಾ ಹಿರೇಮಠ, ಗ್ಯಾರಂಟಿ ಸದಸ್ಯರಾದ ಪದ್ಮಾ ಬಸ್ತಿ, ರೇಣುಕಮ್ಮ ಕಾರಟಗಿ, ತಾವರಗೇರಾ, ಪ.ಪಂ ಸದಸ್ಯೆ ಬೇಬಿ ರೇಖಾ, ಭಾಗ್ಯನಗರ ಪ.ಪಂ ಸದಸ್ಯೆ ಸವಿತಾ ಗೋರಂಟ್ಲಿ, ಆಶ್ರಯ ಸಮಿತಿ ಸದಸ್ಯರಾದ ಕಾವೇರಿ ರ್‍ಯಾಗಿ, ಶಿಲ್ಪಾ, ಮಹಿಳಾ ಕಾಂಗ್ರೆಸ್ ಮುಖಂಡರಾದ ಸೌಭಾಗ್ಯ ಗೊರವರ, ರೇಣುಕಾ ಪುರದ, ಯಶೋಧಾ ಮರಡಿ, ಗಂಗಮ್ಮ ನಾಯಕ, ಚನ್ನಮ್ಮ, ಪ್ರಮೀಳಾ, ಅನಿತಾ ಇತರರು ಇದ್ದರು.

ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಜ್ಯೋತಿ ಗೊಂಡಬಾಳ ಮಾತನಾಡಿ, ನಾವೆಲ್ಲ ಸಂಘಟಿತರಾಗಿ ಮುಂದೆ ಮತ್ತೊಮ್ಮೆ ಕಾಂಗ್ರೆಸ್ ಸರಕಾರ ಬರುವಂತೆ ಮಾಡಬೇಕಿದೆ. ಜಿಲ್ಲೆಯ ಐದೂ ವಿಧಾನಸಭೆಯಲ್ಲಿ ನಮ್ಮ ಶಾಸಕರು ಇರಬೇಕು. ಬರುವ ಸ್ಥಳಿಯ ಸಂಸ್ಥೆಗಳ ಚುನಾವಣೆಗಳು ನಮ್ಮ ಗುರಿಯಾಗಿದ್ದು, ಹೆಚ್ಚಿನ ಸ್ಥಾನ ಗೆಲ್ಲುವಂತೆ ಕೆಲಸ ಮಾಡುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗೋಣ. ಈಗಾಗಲೇ ಸಾಕಷ್ಟು ಮಹಿಳೆಯರಿಗೆ ಸ್ಥಳೀಯ ನಾಮ ನಿರ್ದೇಶನಗಳಲ್ಲಿ ಅವಕಾಶ ಕೊಟ್ಟಿದ್ದಾರೆ. ಬರುವ ದಿನಗಳಲ್ಲಿ ರಾಜ್ಯಮಟ್ಟದ ಅವಕಾಶಗಳೂ ಸಿಗುತ್ತದೆ ಎಂದರು.

# ಸೂಕ್ಷ್ಮ ನೀರಾವರಿಗೆ ಸಹಾಯಧನ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನ ಸೂಕ್ಷ್ಮ ನೀರಾವರಿ ಯೋಜನೆಗಳಡಿ, ಪರಿಶಿಷ್ಟ ಜಾತಿ ರೈತರುಗಳಿಗೆ ಸೂಕ್ಷ್ಮ ನೀರಾವರಿ ಘಟಕಗಳಾದ ಹನಿ ನೀರಾವರಿ ಮತ್ತು ತುಂತುರು ನೀರಾವರಿ ಉಪಕರಣಗಳನ್ನು ಶೇ. 90ರ ಸಹಾಯಧನದಲ್ಲಿ ಪಡೆಯಲು ಅವಕಾಶವಿದ್ದು, ಜಿಲ್ಲೆಯ ರೈತರು ಸದರಿ ಯೋಜನೆಯ ಸದುಪಯೋಗ ಪಡೆದುಕೊಳ್ಳಲು ತಿಳಿಸಿದೆ.

ಕೇಂದ್ರ ಸರ್ಕಾರದ ಹೊಸ ಜಿ.ಎಸ್.ಟಿ ಕಾಯ್ದೆಯನ್ವಯ ಹನಿ ನೀರಾವರಿ ಮತ್ತು ತುಂತುರು ನೀರಾವರಿ ಉಪಕರಣಗಳ ಬೆಲೆ/ದರ ಕಡಿಮೆಯಾಗಿದ್ದು, ಪ್ರಸಕ್ತ/ಹಿಂದಿನ ಸಾಲಿನಲ್ಲಿ ಒಂದು ಹೆಕ್ಟೇರ್ ಪ್ರದೇಶಕ್ಕೆ ಸೂಕ್ಷ್ಮ ನೀರಾವರಿ ಘಟಕವನ್ನು ಅಳವಡಿಸಿಕೊಂಡ ಪರಿಶಿಷ್ಟ ಜಾತಿ ರೈತರು ಹೆಚ್ಚುವರಿಯಾಗಿ ಇನ್ನೊಂದು ಹೆಕ್ಟೇರ್ ಪ್ರದೇಶಕ್ಕೆ ಸೂಕ್ಷ್ಮ ನೀರಾವರಿ ಘಟಕವನ್ನು ಅಳವಡಿಸಿಕೊಳ್ಳಲು ಅರ್ಹರಾಗಿರುತ್ತಾರೆ.

ಜಿಲ್ಲೆಯ ಆಸಕ್ತ ಪರಿಶಿಷ್ಟ ಜಾತಿ ರೈತರು ತಮ್ಮ ವ್ಯಾಪ್ತಿಯ ರೈತ ಸಂಪರ್ಕ ಕೇಂದ್ರ/ಸಹಾಯಕ ಕೃಷಿ ನಿರ್ದೇಶಕರ ಕಛೇರಿಯನ್ನು ಸಂಪರ್ಕಿಸಿ, ಸೂಕ್ಷ್ಮ ನೀರಾವರಿ ಯೋಜನೆಯ ಪ್ರಯೋಜನ ಪಡೆಯಲು ಜಂಟಿ ಕೃಷಿ ನಿರ್ದೇಶಕರಾದ ಚೇತನಾ ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿ.23ರಂದು ಪೂರ್ವಭಾವಿ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

2026ರ ಜನವರಿ 1 ರಂದು ಆಚರಿಸಲಾಗುವ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ನಿಮಿತ್ತ ಡಿಸೆಂಬರ್ 23 ರಂದು ಬೆಳಿಗ್ಗೆ11.00 ಗಂಟೆಗೆ ಹಾಗೂ11:30ಕ್ಕೆ ಡಿಸೆಂಬರ್ 29 ರಂದು ನಡೆಯುವ ರಾಷ್ಟ್ರ ಕವಿ ಕುವೆಂಪು ಜನ್ಮದಿನದ ನಿಮಿತ್ತ ವಿಶ್ವಮಾನವ ದಿನಾಚರಣೆ ಆಚರಿಸುವ ಕುರಿತು ಚರ್ಚಿಸುವ ಸಲುವಾಗಿ ಅಪರ ಜಿಲ್ಲಾಧಿಕಾರಿಗಳು, ಗದಗ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಕರೆಯಲಾಗಿದೆ.

ಸಭೆಗೆ ಆಗಮಿಸಿ ಸಲಹೆ/ಅಭಿಪ್ರಾಯ ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಬಸವರಾಜ ಬಳ್ಳಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮರೆತುಹೋದ ಖಾದ್ಯ ಪಾಕ ಸ್ಪರ್ಧೆ

■ವಿಜಯಸಾಕ್ಷಿ ಸುದ್ದಿ, ಗದಗ

ಅಂತಾರಾಷ್ಟ್ರೀಯ ವಾಣಿಜ್ಯ ಮೇಳ-2026ರ ಪೂರ್ವಭಾವಿಯಾಗಿ ಜಿಲ್ಲಾ ಮಟ್ಟದಲ್ಲಿ ವಿವಿಧ ವಿಭಾಗಗಳಡಿ ಸಿರಿಧಾನ್ಯ ಮತ್ತು ಮರೆತುಹೋದ ಖಾದ್ಯಗಳ ಪಾಕ ಸ್ಪರ್ಧೆಯನ್ನು 06-01-2026ರಂದು ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರ, ಹುಲಕೋಟಿಯಲ್ಲಿ ಆಯೋಜಿಸಲು ಉದ್ದೇಶಿಸಲಾಗಿದೆ. ಸದರಿ ಪಾಕ ಸ್ಪರ್ಧೆಯಲ್ಲಿ ಭಾಗವಹಿಸಲು ಇಚ್ಛಿಸುವ ಸಾರ್ವಜನಿಕರು ಅರ್ಜಿ ನಮೂನೆಗಳನ್ನು ಸಮೀಪದ ರೈತ ಸಂಪರ್ಕ ಕೇಂದ್ರ/ತಾಲೂಕು ಸಹಾಯಕ ಕೃಷಿ ನಿರ್ದೇಶಕರ ಕಛೇರಿಯಿಂದ ಪಡೆದು ಭರ್ತಿ ಮಾಡಿ 31-12-2025ರೊಳಗಾಗಿ ಸಮೀಪದ ರೈತ ಸಂಪರ್ಕ ಕೇಂದ್ರ/ತಾಲೂಕು ಸಹಾಯಕ ಕೃಷಿ ನಿರ್ದೇಶಕರ ಕಛೇರಿಗೆ ಸಲ್ಲಿಸಲು ತಿಳಿಸಿದೆ.

ಸ್ಪರ್ಧಿಗಳು ಭಾಗವಹಿಸಬಹುದಾದ ವಿಭಾಗಗಳು: ಸಿರಿಧಾನ್ಯ (ಸಿಹಿ), ಸಿರಿಧಾನ್ಯ (ಖಾರ), ದೇಶಿ ತಳಿಗಳಿಂದ ತಯಾರಿಸಿದ ಖಾದ್ಯ.

ಸ್ಪರ್ಧಿಗಳಿಗೆ ಸೂಚನೆಗಳು: ಮರೆತುಹೋದ ಖಾದ್ಯಗಳಡಿ ಸಿರಿಧಾನ್ಯಗಳನ್ನು ಹೊರತುಪಡಿಸಿ ಇತರೆ ದೇಶಿ ತಳಿಗಳಡಿ ಬರುವ ಆಹಾರ ಮತ್ತು ಎಣ್ಣೆಕಾಳು ಬೆಳೆಗಳ, ತರಕಾರಿ ಮತ್ತು ಹಣ್ಣುಗಳು ಇತ್ಯಾದಿ ಖಾದ್ಯಗಳನ್ನು ತಯಾರಿಸುವದು. ಪ್ರತಿ ಸ್ಪರ್ಧಿಗೆ ಒಂದು ವಿಭಾಗದಲ್ಲಿ ಭಾಗವಹಿಸಲು ಮಾತ್ರ ಅವಕಾಶವಿರುತ್ತದೆ. ಗದಗ ಜಿಲ್ಲೆಯ ಸಾರ್ವಜನಿಕರಿಗೆ ಮಾತ್ರ ಅವಕಾಶವಿರುತ್ತದೆ (ವಿದ್ಯಾರ್ಥಿಗಳು, ಕೃಷಿ ಇಲಾಖೆಯ ಅಧಿಕಾರಿ/ಸಿಬ್ಬಂದಿಗಳಿಗೆ ಭಾಗವಹಿಸಲು ಅವಕಾಶವಿರುವುದಿಲ್ಲ). 2024-25ನೇ ಸಾಲಿನಲ್ಲಿ ರಾಜ್ಯ ಮಟ್ಟದ ಪಾಕ ಸ್ಪರ್ಧೆಯಲ್ಲಿ ಭಾಗವಹಿಸಿ ಪ್ರಥಮ/ದ್ವಿತೀಯ/ತೃತಿಯ ಬಹುಮಾನ ಪಡೆದ ಸ್ಪರ್ಧಿಗಳಿಗೆ ಭಾಗವಹಿಸಲು ಅವಕಾಶವಿರುವುದಿಲ್ಲ.

ಖಾದ್ಯ/ತಿನಿಸುಗಳನ್ನು ಮನೆಯಲ್ಲಿಯೇ ತಯಾರಿಸಿ ಪ್ರದರ್ಶಿಸುವುದು (ಬಳಸುವ ಸಾಮಗ್ರಿಗಳ ಮಾದರಿಗಳನ್ನು ಕಡ್ಡಾಯವಾಗಿ ಪ್ರದರ್ಶಿಸುವದು).

ತಯಾರಿಸಿದ ತಿನಿಸುಗಳ ಪ್ರದರ್ಶನ, ತಯಾರಿಕೆಗೆ ಬಳಸಿದ ಪದಾರ್ಥಗಳು, ತೋರಿಕೆ, ರುಚಿ ಹಾಗೂ ಸುವಾಸನೆಗಳ ಮೇಲೆ ಅಂತಿಮ ನಿರ್ಧಾರ ಕೈಗೊಳ್ಳಲಾಗುವದು (ನಿರ್ಣಾಯಕರ ತಿರ್ಮಾನವೇ ಅಂತಿಮವಾಗಿರುತ್ತದೆ) ಎಂದು ಕೃಷಿ ಇಲಾಖೆ ಪ್ರಕಟಣೆ ತಿಳಿಸಿದೆ.



ಭಾರತ ಸರ್ಕಾರದ ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಪ್ರಹ್ಲಾದ ಜೋಶಿ ಶನಿವಾರ ಬಾಳೆಹೊನ್ನೂರು ಶ್ರೀ ಜಗದ್ಗುರು ರಂಭಾಪುರಿ ಪೀಠಕ್ಕೆ ಭೇಟಿ ನೀಡಿ, ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮತ್ತು ಶ್ರೀ ಜಗದ್ಗುರು ರೇಣುಕಾಚಾರ್ಯ ಮಂದಿರದಲ್ಲಿ ಪೂಜೆ ಸಲ್ಲಿಸಿದರು. ನಂತರ ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳವರ ದರ್ಶನಾಶೀರ್ವಾದ ಪಡೆದರು. ಈ ಸಂದರ್ಭದಲ್ಲಿ ಸಂಸದ ಕೋಟ ಶ್ರೀನಿವಾಸ ಪೂಜಾರಿ, ಮಾಜಿ ಸಚಿವ ಡಿ.ಎನ್. ಜೀವರಾಜ, ವಿಧಾನ ಪರಿಷತ್ ಸದಸ್ಯ, ಮಾಜಿ ಸಚಿವ ಸಿ.ಟಿ. ರವಿ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

## ಬಸಯ್ಯಜ್ಜ, ಶಿವಪ್ಪಜ್ಜನವರ 32ನೇ ವರ್ಷದ ಪುಣ್ಯಾರಾಧನೆ ಡಿ.24ಕ್ಕೆ

# ವಿವಿಧ ಧಾರ್ಮಿಕ, ಸಾಂಸ್ಕೃತಿ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಚಿಕ್ಕಹಂದಿಗೋಳ ಗ್ರಾಮದ ಗುಡ್ಡಿಮಠದಲ್ಲಿ ವೇ. ಮೂ.ಲಿಂ. ಬಸಯ್ಯ ಸ್ವಾಮಿಗಳ ಹಾಗೂ ಅವರ ಪರಮ ಶಿಷ್ಯರಾಗಿದ್ದ ಹಿರೇಹಂದಿಗೋಳ ಗ್ರಾಮದ ಲಿಂ. ಶಿವಪ್ಪಜ್ಜನವರು ಅನವಾಲದ ಆವರ 32ನೇ ವರ್ಷದ ಪುಣ್ಯಾರಾಧನೆ ಕಾರ್ಯಕ್ರಮ ಡಿ. 24ರಂದು ಜರುಗಲಿದೆ.

ಪುಣ್ಯಾರಾಧನೆ ಕಾರ್ಯಕ್ರಮದ ಮುನ್ನಾ ದಿನವಾದ ಡಿ. 23ರಂದು ಚಿಕ್ಕಹಂದಿಗೋಳ ಗ್ರಾಮದ ಶರಣಬಸವೇಶ್ವರ ಹಾಗೂ ಮಾರುತೇಶ್ವರ ಭಜನಾ ಸಂಘದವರಿಂದ ರಾತ್ರಿ 9 ಗಂಟೆಯಿಂದ ಅಹೋರಾತ್ರಿ ತತ್ವಪದಗಳ ಭಜನಾ ಪದ ಜರುಗಲಿದೆ. ಡಿ. 24ರಂದು ಬೆಳಿಗ್ಗೆ 6.30ಕ್ಕೆ ಬಸಯ್ಯಜ್ಜ ಹಾಗೂ ಶಿವಪ್ಪಜ್ಜ ಅವರ ಶಿಲಾ ಮೂರ್ತಿಗೆ ಮಹಾರುದ್ರಾಭಿಷೇಕ, ನಂತರ ಉಡಿ ತುಂಬುವ ಕಾರ್ಯಕ್ರಮ ನಡೆಯುವುದು. 11 ಗಂಟೆಗೆ ಧರ್ಮ ಸಭೆ ಜರುಗುವುದು.





ಅತಿಥಿಗಳಾಗಿ ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಹೆಚ್.ಪಾಟೀಲ, ರಾಷ್ಟ್ರೀಯ ಯೂಥ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ವಿವೇಕ ಯಾವಗಲ್, ಎಸ್. ಹೆಚ್. ಶಿವನಗೌಡ್ರ, ಡಿವೈಎಸ್ಪಿ ಮುರ್ತುಜಾ ಖಾದ್ರಿ, ಗದಗ ಗ್ರಾಮೀಣ ಸಿಪಿಐ ಸಿದ್ದರಾಮೇಶ್ವರ ಗಡೇದ, ಉಮಾದೇವಿ, ಪಿಎಸ್‌ಐ ಅಣ್ಣಿಗೇರಿ, ದಾವಲಸಾಬ ಹಿತ್ತಲಮನಿ, ಶ್ರೀನಿವಾಸ ದ್ಯಾವನೂರ, ಪಿ.ಎಫ್. ಮೆಣಸಿನಕಾಯಿ, ವಿಷ್ಣು ನಾರಾಯಣ ಹಂಚಾಟೆ, ಮಂಜುನಾಥ್ ಪರ್ವತಗೌಡ, ಚೆನ್ನಪ್ಪ ಫ.ಬೆಳ್ಳಟ್ಟಿ, ಮಹಾದೇವಪ್ಪ ಗೊರವರ, ತೋಟನಗೌಡ ನಿಂ.ಗೌಡ್ರ, ವೀರೇಶ ಕಾತರಕಿ, ಶಂಕ್ರಪ್ಪ ಬಿಂಗಿ, ನಿಂಗಪ್ಪ ಹೈದ್ರಿ, ಶಿವಶಂಕರಪ್ಪ ಆರಟ್ಟಿ, ಹನುಮಂತಪ್ಪ ಇಂಗಳಹಳ್ಳಿ ಆಗಮಿಸುವರು.

ಸಂಜೆ 6 ಗಂಟೆಗೆ ಕನಕಶ್ರೀ ಮೆಲೋಡಿಸ್ ಕನಕೂರ ತಂಡದ ಗಾಯಕರಾದ ಈಶ್ವರ ಹಿರೇಮಠ, ಪಲ್ಲವಿ ಗಜೇಂದ್ರಗಡ, ಶ್ವೇತಾ ಸಿಂಗರ್, ಗೋಪಾಲ ಮುಗದ ಇವರಿಂದ ಸಂಗೀತ ಸಂಜೆ ಕಾರ್ಯಕ್ರಮ ಜರುಗುವುದು. ಇದೇ ಸಮಯದಲ್ಲಿ ಹಿರೇಹಂದಿಗೋಳ ಗ್ರಾಮದ ದೊಸ್ತಾನ ಮುತ್ತಣ್ಣ ಗಾಯನ ಕಾರ್ಯಕ್ರಮ ನಡೆಸಿಕೊಡುವರು.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಪರಮ ಪೂಜ್ಯ ಶಶಿಕಾಂತ ಗುರೂಜಿ, ವೇ.ಮೂ. ಬಸವಲಿಂಗಯ್ಯ ಬಸಯ್ಯ ಗುಡ್ಡಿಮಠ, ಉದ್ಘಾಟಕರಾಗಿ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ರಾಜ್ಯಾಧ್ಯಕ್ಷ ಚುನಪ್ಪಾ ಪೂಜಾರ, ಮುಖ್ಯ ಅತಿಥಿಗಳಾಗಿ ಮಹೇಶ್‌ಗೌಡ ಎಂ.ಸುಬೇದಾರ ಸಗರ, ನಿವೇದಿತಾ ಹಿರೇಮಠ, ಗೀತಾ ಸಿದ್ದಲಿಂಗಪ್ಪ ಕಡೇಮನಿ, ರವಿ ಮೆಟಗುಡ್ಡ, ದಾದಪೀರ ಅಣ್ಣಿಗೇರಿ, ಕಾಶಪ್ಪ ಕೋರಿ, ರತ್ನವ್ವ ಶಿವನಗೌಡ ಗೌಡರ, ಸುಶೀಲ ತಿರಕಪ್ಪ ತಳವಾರ, ರುದ್ರವ್ವ ಹನುಮಂತಪ್ಪ ದುಂದೂರ, ಶಕುಂತಲಾ ಕೃಷ್ಣಪ್ಪ ಶಿಶ್ವಿನಹಳ್ಳಿ ಹಾಗೂ ಗ್ರಾಮದ ಸದ್ಭಕ್ತರು, ಗುರು-ಹಿರಿಯರು, ರೈತ ಬಾಂಧವರು ಉಪಸ್ಥಿತರಿರುವರು ಎಂದು ಕಾರ್ಯಕ್ರಮದ ನೇತೃತ್ವ ವಹಿಸಿರುವ ಪೂಜ್ಯ ಬಸಯ್ಯ ಅಜ್ಜನವರ ಸುಪುತ್ರ ಹಾಗೂ ಪೂಜ್ಯ ಶಿವಪ್ಪಜ್ಜ ಆನವಾಲದವರ ಪ್ರಿಯ ಶಿಷ್ಯರಾದ ಬಸವಲಿಂಗಯ್ಯ ಬಸಯ್ಯ ಗುಡ್ಡಿಮಠ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಹೊಸಳ್ಳಿ ಅಭಿನವ ಬೂದಿಮಹಾಸ್ವಾಮಿಗಳು ವಹಿಸುವರು. ಮುಖ್ಯ ಅತಿಥಿಗಳಾಗಿ ಸಚಿವ ಎಚ್.ಕೆ. ಪಾಟೀಲ, ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಬಿ.ಆರ್. ಯಾವಗಲ್ಲ, ಧಾರವಾಡ ಕೆಎಂಎಫ್ ನಿರ್ದೇಶಕ ಹೆಚ್.ಜಿ. ಹಿರೇಗೌಡ್ರ, ಸಾರಿಗೆ ಇಲಾಖೆಯ ಉಪಾಧ್ಯಕ್ಷ ಪೀರಸಾಬ ಕೌತಾಳ ಪಾಲ್ಗೊಳ್ಳುವರು.

## 'ಶರಣ ಸಂಗಮ' ಕಾರ್ಯಕ್ರಮ ಇಂದು



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಡಿ. 21ರಂದು ಬೆಳಿಗ್ಗೆ 10ಕ್ಕೆ ನಡೆಯಲಿರುವ ಬಸವದಳದ 1677ನೇ ಶರಣ ಸಂಗಮದಲ್ಲಿ ಶರಣ ಒಕ್ಕಲಿಗ ಮುದ್ದಣ್ಣನವರು ಹಾಗೂ ವಿದೇಶ ಪ್ರವಾಸ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷ, ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಶರಣತತ್ವ ಚಿಂತಕ, ಶರಣ ಎಂ.ಬಿ. ಲಿಂಗಧಾಳ ಉಪನ್ಯಾಸ ಮಾಡುವರು.

ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

### 'ಬಾಲ್ಯ ವಿವಾಹ ಮುಕ್ತ ಭಾರತ' ಅಭಿಯಾನ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು

# ಬಾಲ್ಯ ವಿವಾಹ ತಡೆಗಟ್ಟಲು ಕಠಿಣ ಕ್ರಮ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಭಾರತ ಸರ್ಕಾರವು ಮುಂದಿನ 10 ವರ್ಷಗಳಲ್ಲಿ ಇಡೀ ದೇಶವನ್ನು ಬಾಲ್ಯ ವಿವಾಹ ಮುಕ್ತ ಭಾರತ ಮಾಡಲು ಅಭಿಯಾನ ಹಮ್ಮಿಕೊಳ್ಳುವಂತೆ ಎಲ್ಲ ರಾಜ್ಯಗಳಿಗೆ, ಜಿಲ್ಲೆಗಳಿಗೆ ಸೂಚಿಸಿದೆ. ಧಾರವಾಡ ಜಿಲ್ಲೆಯನ್ನು ಬಾಲ್ಯ ವಿವಾಹ ಮುಕ್ತ ಜಿಲ್ಲೆಯನ್ನಾಗಿ ಮಾಡುವ ಪೂರ್ವದಲ್ಲಿ ಜಿಲ್ಲೆಯ ಎಲ್ಲ ಗ್ರಾಮಗಳನ್ನು ಬಾಲ್ಯ ವಿವಾಹ ಮುಕ್ತ ಗ್ರಾಮಗಳನ್ನಾಗಿ ಘೋಷಿಸಬೇಕು. ಅದಕ್ಕಾಗಿ ಹಮ್ಮಿಕೊಂಡಿರುವ 100 ದಿನಗಳ ಮಕ್ಕಳ ಜಾಗೃತಿ ಕಾರ್ಯಕ್ರಮಗಳು ಜಿಲ್ಲೆಯ ಪ್ರತಿ ಮನೆಗಳಿಗೆ ತಲುಪಬೇಕೆಂದು ಜಿಲ್ಲಾ ಬಾಲ್ಯ ವಿವಾಹ ನಿಷೇಧ ಸಮಿತಿಯ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಅವರು ಶನಿವಾರ ಮಧ್ಯಾಹ್ನ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮಕ್ಕಳ ಸಹಾಯವಾಣಿ 1098 ಮತ್ತು 112 ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಬಾಲ್ಯ ವಿವಾಹ ಮುಕ್ತ ಭಾರತ ಅಭಿಯಾನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ, ಮಾತನಾಡಿದರು.



ಜಿಲ್ಲೆಯಲ್ಲಿ ಬಾಲ್ಯ ವಿವಾಹಗಳನ್ನು ತಡೆಗಟ್ಟಲು ಕಠಿಣ ಕ್ರಮಗಳನ್ನು ಕೈಗೊಳ್ಳಲಾಗಿದೆ. ಗ್ರಾಮ ಹಾಗೂ ತಾಲೂಕು ಮಟ್ಟದಲ್ಲಿ ವಿವಿಧ ಅಧಿಕಾರಿಗಳನ್ನು ಹೊಂದಿರುವ ಬಾಲ್ಯ ವಿವಾಹ ನಿಯಂತ್ರಣ ಮತ್ತು ನಿಷೇಧ ಸಮಿತಿಗಳನ್ನು ರಚಿಸಿ ಸಕ್ರಿಯಗೊಳಿಸಲಾಗಿದೆ. ಕಳೆದ ವರ್ಷ ಬಾಲ್ಯ ವಿವಾಹಗಳ ಸಂಖ್ಯೆ ಕಡಿಮೆಯಾಗಿದ್ದು, ಮುಂದಿನ ವರ್ಷಕ್ಕೆ ಅದನ್ನು ಶೂನ್ಯಗೊಳಿಸಲು ಎಲ್ಲ ಅಧಿಕಾರಿಗಳು ಶ್ರಮಿಸಬೇಕೆಂದು ಅವರು ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಿದ ಸದಸ್ಯ ಕಾರ್ಯದರ್ಶಿ, ಹಿರಿಯ ಸಿವಿಲ್ ನ್ಯಾಯಾಧೀಶ ಪಿ.ಎಫ್. ದೊಡ್ಡಮನಿ ಅಭಿಯಾನ ಉದ್ಘಾಟಿಸಿ ಮಾತನಾಡಿ, ಸಮಾಜದಲ್ಲಿ ಬಾಲ್ಯ ವಿವಾಹಗಳು ಜರುಗದಂತೆ ಕಟ್ಟುನಿಟ್ಟಿನ ಕ್ರಮವಹಿಸಲು ಸರ್ವೋಚ್ಚ, ಉಚ್ಚ ನ್ಯಾಯಾಲಯಗಳು ನಿರ್ದೇಶಿಸಿವೆ. ಅದರಂತೆ ಇಡೀ ದೇಶದಲ್ಲಿ ಬಾಲ್ಯ ವಿವಾಹ ಮುಕ್ತ ಭಾರತ ಮಾಡಲು ಅಭಿಯಾನವನ್ನು ಆರಂಭಿಸಲಾಗಿದೆ. ವಿಶೇಷವಾಗಿ ಶಾಲಾ ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಇಲಾಖೆ ಹಾಗೂ ಕಾರ್ಮಿಕ ಇಲಾಖೆಗಳು ಪಂಚಾಯತ ರಾಜ್ ಇಲಾಖೆಯೊಂದಿಗೆ ಕೈಜೋಡಿಸಿ, ಈ ಅಭಿಯಾನವನ್ನು ಯಶಸ್ವಿಗೊಳಿಸಬೇಕೆಂದು ಹೇಳಿದರು.

> ಬಾಲ್ಯ ವಿವಾಹವನ್ನು ಹೋಗಲಾಡಿಸಲು ಸಂಬಂಧಪಟ್ಟ ಅಧಿಕಾರಿಗಳು ಮಾತ್ರ ತಿಳುವಳಿಕೆ ನೀಡಿದರೆ ಸಾಧ್ಯವಾಗುವುದಿಲ್ಲ. ಪ್ರತಿಯೊಬ್ಬರೂ ಪ್ರತಿಯೊಂದು ಹಂತದಲ್ಲಿ ಜನರಿಗೆ ತಿಳುವಳಿಕೆಯನ್ನು ನೀಡಿ, ಅಂತಹ ಪ್ರಕರಣಗಳು ಕಂಡುಬಂದಲ್ಲಿ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸುವುದು ನಾಗರಿಕರ ಕರ್ತವ್ಯ ಹಾಗೂ ಸಮಾಜದ ಜವಾಬ್ದಾರಿಯೂ ಹೌದು ಎಂದು ಡಿ.ಸಿ ದಿವ್ಯ ಪ್ರಭು ಹೇಳಿದರು.

ವೇದಿಕೆಯಲ್ಲಿ ಪ್ರೋಬೇಷನರಿ ಐಎಎಸ್ ಅಧಿಕಾರಿ ರಿತಿಕಾ ವರ್ಮಾ, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ಬಿ.ವಾಯ್. ಪಾಟೀಲ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಡಾ. ಎಚ್.ಎಚ್. ಕುಕನೂರ, ಜಿಲ್ಲಾ ಆರೋಗ್ಯಾಧಿಕಾರಿ ಡಾ. ಎಸ್.ಎಮ್. ಹೊನಕೇರಿ, ಡಿವೈಎಸ್‌ಪಿ ವಿನೋದ ಮುಕ್ತೇದಾರ ಉಪಸ್ಥಿತರಿದ್ದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ದೀಪಾ ಜಾವೂರ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಮಹ್ಮದ್‌ಅಲಿ ತಹಸೀಲ್ದಾರ ನಿರೂಪಿಸಿದರು. ಪ್ರಕಾಶ ಕೊಡ್ಲಿವಾಡ ವಂದಿಸಿದರು.

ಈ ಸಂದರ್ಭದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಬಾನುಮತಿ ಎಚ್, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಎಸ್. ಕೆಳದಿಮಠ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕಿ ಪಿ. ಶುಭ, ಮಹಿಳಾ ಮತ್ತು ಅಭಿವೃದ್ಧಿ ಇಲಾಖೆಯ ಯೋಜನಾ ನಿರ್ದೇಶಕಿ ಡಾ.ಕಮಲಾ ಬೇಲೂರು ಹಾಗೂ ಎಲ್ಲ ತಾಲೂಕಿನ ತಹಸೀಲ್ದಾರರು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಕಾರ್ಮಿಕ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಜಿಲ್ಲೆಯ ಕ್ರೀಡಾಪಟುಗಳು ರಾಷ್ಟ್ರ ಮಟ್ಟದಲ್ಲಿ ಮಿಂಚಲಿ

▸▸ ಮೊದಲನೇ ಪುಟದಿಂದ



> ಇದೇ ಸಂದರ್ಭದಲ್ಲಿ ಪ.ಪೂ.ಶಿ ಇಲಾಖೆಯಲ್ಲಿ ಸಾಧನೆಗೈದ ಹಾಗೂ ಕ್ರೀಡಾಕೂಟಕ್ಕೆ ಸಹಾಯ-ಸಹಕಾರ ಸಲ್ಲಿಸಿದ ಮೇಜರ್ ಡಾ. ಪ್ರಾ. ಬಿ.ಎಸ್. ರಾಠೋಡ, ರಾಜೇಶ ಕುಲಕರ್ಣಿ, ಪ್ರಾ. ವಿ.ಎಸ್. ದಲಾಲಿ ಹಾಗೂ ರಾಜ್ಯಮಟ್ಟದಲ್ಲಿ ಸಾಧನೆಗೈದ ಗದಗ ಜಿಲ್ಲೆಯ ಪ.ಪೂ ಕಾಲೇಜು ವಿದ್ಯಾರ್ಥಿಗಳನ್ನು, ಅಂತಾರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ ಪಾಲ್ಗೊಂಡ ವಿಕಲಚೇತನ ಕ್ರೀಡಾಪಟುಗಳನ್ನು ಮತ್ತು ಜಿಲ್ಲಾ ಹಾಗೂ ತಾಲೂಕು ಮಟ್ಟದ ಪ.ಪೂ ಕಾಲೇಜುಗಳ ಕ್ರೀಡಾಕೂಟಗಳನ್ನು ಯಶಸ್ವಿಯಾಗಿ ಸಂಘಟಿಸಿದ ಪ್ರಾಚಾರ್ಯರನ್ನು ಸನ್ಮಾನಿಸಿ, ಅಭಿನಂದಿಸಲಾಯಿತು.

ರಾಜ್ಯದ 30 ಶೈಕ್ಷಣಿಕ ಜಿಲ್ಲೆಗಳಿಂದ ಸುಮಾರು 300ಕ್ಕೂ ಹೆಚ್ಚು ಬಾಲಕ ಮತ್ತು ಬಾಲಕಿಯರ ತಂಡದ ಕ್ರೀಡಾಪಟುಗಳು ಭಾಗವಹಿಸಿದ್ದರು. ಸಮಾರಂಭದಲ್ಲಿ ಜಿಲ್ಲೆಯ ಪ.ಪೂ ಕಾಲೇಜುಗಳ ಪ್ರಾಚಾರ್ಯರು ಹಾಗೂ ಉಪನ್ಯಾಸಕರುಗಳಾದ ವಿ.ಎಂ. ಪಾಟೀಲ, ಬಿ.ವಿ. ಪಾಟೀಲ, ರಮಾಕಾಂತ ದೊಡ್ಡಮನಿ, ಶಶಿಧರ ಕುರಿ, ಕಿಶೋರ ನಾಗರಕಟ್ಟಿ, ಪೂರ್ಣಿಮಾ ಹೊಸಮನಿ, ವಾಯ್.ಎಸ್. ಮತ್ತೂರ, ಪ್ರಾ. ಹಾವೇರಿ, ಜಿಲ್ಲಾ ಕ್ರೀಡಾ ಸಂಚಾಲಕರಾದ ಎಚ್.ಎಸ್. ಶಿವಪ್ಪಯ್ಯನಮಠ, ವಾಯ್.ಎಸ್. ಹುನಗುಂದ, ಚೇಗರೆಡ್ಡಿ ಸೇರಿದಂತೆ ಉಪನ್ಯಾಸಕರ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಕ್ರೀಡಾಪಟುಗಳು ಉಪಸ್ಥಿತರಿದ್ದರು.

ಆಮಂತ್ರಿತರಾಗಿ ಭಾಗವಹಿಸಿದ್ದರು.

ಸಂಜನಾ ತೆಂಬದಮನಿ ಹಾಗೂ ಸಂಗಡಿಗರು ನಾಡಗೀತೆ ಪ್ರಸ್ತುತಪಡಿಸಿದರು. ಪ್ರಾಚಾರ್ಯರ ಸಂಘದ ಅಧ್ಯಕ್ಷ ಎಂ.ಸಿ. ಕಟ್ಟಿಮನಿ ಸ್ವಾಗತಿಸಿದರು. ಡಾ. ದತ್ತಪ್ರಸನ್ನ ಪಾಟೀಲ, ಪ್ರೊ. ಪ್ರಿಯಾಂಕ ಬೊಮ್ಮಾಯಿನವರ ನಿರೂಪಿಸಿದರು. ಉಪನ್ಯಾಸಕರ ಸಂಘದ ಅಧ್ಯಕ್ಷ ಎಸ್.ಎಸ್. ಸೋಮಣ್ಣವರ ವಂದಿಸಿದರು. ಪ.ಪೂ.ಶಿ ಇಲಾಖೆಯ ಉಪನಿರ್ದೇಶಕ ಸಿದ್ದಲಿಂಗ ಮಸನಾಯಿಕ, ಹಿರಿಯ ಪ್ರಾಚಾರ್ಯರಾದ ಜಿ.ಎನ್. ಕುರ್ತಕೋಟಿ, ಗಿರಿತಮ್ಮಣ್ಣವರ, ಜೆ.ಎ. ಶಿರಸಿ, ಹಾದಿಮನಿ, ಅಶೋಕ ಅಂಗಡಿ ವೇದಿಕೆಯ ಮೇಲೆ ಉಪಸ್ಥಿತರಿದ್ದರು.

# ಖಾಸಗಿ ಶಾಲಾ ವಾಹನಗಳ ತನಿಖೆ ನಡೆಸಿ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನಲ್ಲಿರುವ ಖಾಸಗಿ ಶಾಲಾ ವಾಹನಗಳ ಬಗ್ಗೆ ಸೂಕ್ತ ತನಿಖೆ ನಡೆಸುವಂತೆ ಸಾರಿಗೆ ಇಲಾಖೆ ಮತ್ತು ಪೊಲೀಸ್ ಇಲಾಖೆ ಅಧಿಕಾರಿಗಳಿಗೆ ಸೂಕ್ತ ಮಾರ್ಗದರ್ಶನ ನೀಡಬೇಕಲ್ಲದೆ, ನಿಯಮ ಉಲ್ಲಂಘಿಸುವ ಶಾಲಾ ಆಡಳಿತ ಆಡಳಿತ ಮಂಡಳಿಯವರ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ಶನಿವಾರ ಶಿರಹಟ್ಟಿಯಲ್ಲಿ ಕರವೇ ತಾಲೂಕಾ ಘಟಕದ ವತಿಯಿಂದ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಕರವೇ ತಾಲೂಕಾ ಗೌರವಾಧ್ಯಕ್ಷ ಅಶೋಕ ಹುಬ್ಬಳ್ಳಿ, ಶಿರಹಟ್ಟಿ ನಗರ ಘಟಕದ ಅಧ್ಯಕ್ಷ ಮಾಬುಸಾಬ ಧಾಲಾಯತ, ಶಿರಹಟ್ಟಿ ತಾಲೂಕಿನಾದ್ಯಂತ ಸಾಕಷ್ಟು ಖಾಸಗಿ ಶಾಲೆಗಳಿದ್ದು, ಪ್ರತಿಯೊಂದು ಶಾಲೆಗಳು ವಾಹನವನ್ನು ಹೊಂದಿವೆ. ಆ ಶಾಲಾ ವಾಹನದಲ್ಲಿಯೇ ಶಾಲಾ ಮಕ್ಕಳನ್ನು ಶಾಲೆಗೆ ಕರೆತರುವುದು ಮತ್ತು ಬಿಟ್ಟು ಬರುವ ಕೆಲಸ ಮಾಡುತ್ತಿದ್ದು, ಶಾಲಾ ಆಡಳಿತ ಮಂಡಳಿಯವರು ಬೇಜವಾಬ್ದಾರಿತನವನ್ನು ತೋರುತ್ತಿರುವುದು ಸ್ಪಷ್ಟವಾಗಿದೆ. ಇಂತಹ ಘಟನೆಗಳಿಗೆ ಶಾಲಾ ವಾಹನದಲ್ಲಿ ಆಸನಗಳಿದ್ದಷ್ಟು ಮಕ್ಕಳನ್ನು ಕೂಡಿಸದೇ ಮಿತಿಮೀರಿ ಹೆಚ್ಚಿನ ಸಂಖ್ಯೆಯಲ್ಲಿ ಮಕ್ಕಳನ್ನು ಶಾಲಾ ವಾಹನದಲ್ಲಿ ತುಂಬುತ್ತಿರುವುದು, ವಾಹನಗಳಿಗೆ ಇನ್ಸುರೆನ್ಸ್ ಇಲ್ಲದಿರುವುದು ಕಾರಣ.

ಎಷ್ಟೋ ವಾಹನಗಳು ಸುಸ್ಥಿತಿಯಲ್ಲಿರುವುದಿಲ್ಲ. ಅಂತಹ ವಾಹನಗಳು ಕಂಡುಬಂದಲ್ಲಿ ಅವುಗಳನ್ನು ಸೀಜ್ ಮಾಡಬೇಕು. ಮಕ್ಕಳ ಹಿತದೃಷ್ಟಿಯಿಂದ ಪ್ರತಿಯೊಂದು ಖಾಸಗಿ ಶಾಲಾ ವಾಹನಗಳನ್ನು ಅಧಿಕಾರಿಗಳಿಂದ ಪರಿಶೀಲನೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಮತ್ತು ಶಾಲಾ ಆಡಳಿತ ಮಂಡಳಿಯವರ ಮೇಲೆಯೂ ಸಹ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮಂಜುನಾಥ ಹುಬ್ಬಳ್ಳಿ, ಪವನ ಕುರಿ, ಎಂ.ಬಿ. ಹೆಸರೂರ, ಪ್ರಶಾಂತ ಹುಬ್ಬಳ್ಳಿ ಮುಂತಾದವರು ಉಪಸ್ಥಿತರಿದ್ದರು.

# ಸಿರಿಯಾದ ಐಸಿಸ್ ಅಡಗುತಾಣಗಳ ಮೇಲೆ ಅಮೆರಿಕ ವಾಯುದಾಳಿ

■ವಿಜಯಸಾಕ್ಷಿ ಸುದ್ದಿ, ಅಮೆರಿಕ

ಕಳೆದ ವಾರ ಅಮೆರಿಕದ ಸಿಬ್ಬಂದಿ ಮೇಲೆ ನಡೆದ ಮಾರಕ ದಾಳಿಗೆ ಪ್ರತೀಕಾರವಾಗಿ ಅಮೆರಿಕವು ಮಧ್ಯ ಸಿರಿಯಾದಾದ್ಯಂತ ಡಜನ್‌ಗಟ್ಟಲೆ ಇಸ್ಲಾಮಿಕ್ ಸ್ಟೇಟ್ (ಐಎಸ್) ನೆಲೆಗಳ ಮೇಲೆ ವಾಯುದಾಳಿ ನಡೆಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

'ಆಪರೇಷನ್ ಹಾಕೈ ಸ್ಟ್ರೈಕ್' ಎಂದು ಕರೆಯಲ್ಪಡುವ ಕಾರ್ಯಾಚರಣೆಯಡಿಯಲ್ಲಿ "ಐಸಿಸ್ ಹೋರಾಟಗಾರರು, ಅವರ ಮೂಲಸೌಕರ್ಯ ಮತ್ತು ಶಸ್ತ್ರಾಸ್ತ್ರ ತಾಣಗಳನ್ನು" ಗುರಿಯಾಗಿಸಿಕೊಂಡು ದಾಳಿ ನಡೆಸಲಾಗಿದೆ ಎಂದು ರಕ್ಷಣಾ ಕಾರ್ಯದರ್ಶಿ ಪೀಟ್ ಹೆಗ್ಸೆತ್ ದೃಢಪಡಿಸಿದರು.

ಮುಂದಿನ ದಿನಗಳಲ್ಲಿ ಹೆಚ್ಚುವರಿ ಕ್ರಮ ಕೈಗೊಳ್ಳಬಹುದು ಎಂದು ಹೇಳಿದರು.

## ಎಸ್‌ಐಆರ್: ಸ್ಟಾಲಿನ್ ಅವರ ಕೊಳತ್ತೂರು ಕ್ಷೇತ್ರದಲ್ಲಿ 1 ಲಕ್ಷ ಮತದಾರ ಹೆಸರು ಕರಡು ಮತದಾರರ ಪಟ್ಟಿಯಲ್ಲಿ ಡಿಲೀಟ್

■ವಿಜಯಸಾಕ್ಷಿ ಸುದ್ದಿ, ಕೇರಳ

ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ಅವರ ಕೊಳತ್ತೂರು ಕ್ಷೇತ್ರದಿಂದ 1,03,812 ಕ್ಕೂ ಹೆಚ್ಚು ಮತದಾರರ ಹೆಸರು ತೆಗೆದುಹಾಕಲಾಗಿದೆ. ಇದು ತಮಿಳುನಾಡಿನಲ್ಲಿ ರಾಜ್ಯಾದ್ಯಂತ ನಡೆದ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಮತದಾರರ ಪಟ್ಟಿಯಲ್ಲಿನ ಅತಿದೊಡ್ಡ ಮತದಾರರ ಕಡಿತಗಳಲ್ಲಿ ಒಂದಾಗಿದೆ.

ಪರಿಷ್ಕರಣೆ ಕಾರ್ಯದ ನಂತರ ಬಿಡುಗಡೆಯಾದ ಕರಡು ಮತದಾರರ ಪಟ್ಟಿಯು ಅಮಾನ್ಯ, ನಕಲು ಅಥವಾ ಹಳೆಯ ಮತದಾರರ ಹೆಸರು ತೆಗೆದುಹಾಕುವ ತೀವ್ರ ಪರಿಷ್ಕರಣೆಯನ್ನು ಸೂಚಿಸುತ್ತದೆ. ಇದು 2026 ರ ವಿಧಾನಸಭಾ ಚುನಾವಣೆಗೆ ಮುಂಚಿತವಾಗಿ ಅತ್ಯಂತ ವ್ಯಾಪಕವಾದ ಶುದ್ಧೀಕರಣಗಳಲ್ಲಿ ಒಂದಾಗಿದೆ.

ಎಸ್‌ಐಆರ್ ಪರಿಶೀಲನೆಗೆ ಮೊದಲು, ತಮಿಳುನಾಡು ಅಕ್ಟೋಬರ್ 27 ರ ಹೊತ್ತಿಗೆ ದಾಖಲೆಯಲ್ಲಿ 6,41,14,587 ಮತದಾರರನ್ನು ಹೊಂದಿತ್ತು.

# ಬೆಂಬಲ ಬೆಲೆ ಯೋಜನೆಯಡಿ ಹತ್ತಿ ಖರೀದಿ

■ವಿಜಯಸಾಕ್ಷಿ ಸುದ್ದಿ, ಗದಗ

2025ರ ಮುಂಗಾರು ಹಂಗಾಮಿನಲ್ಲಿ ಪ್ರಮುಖ ವಾಣಿಜ್ಯ ಬೆಳೆಯಾದ ಹತ್ತಿಯನ್ನು ಜಿಲ್ಲೆಯಲ್ಲಿ ಅಂದಾಜು 7000 ಹೆ. ಪ್ರದೇಶದಲ್ಲಿ ಬೆಳೆಯಲಾಗಿದೆ. ಪ್ರಸ್ತುತ ಹತ್ತಿ ಕೃಷಿ ಉತ್ಪನ್ನಕ್ಕೆ ಮಾರುಕಟ್ಟೆ ದರವು ಕಡಿಮೆಯಾಗಿರುದರಿಂದ ಕೇಂದ್ರ ಸರ್ಕಾರವು ಬೆಂಬಲ ಬೆಲೆ ಯೋಜನೆಯಡಿ ಮಧ್ಯಮ ಎಳೆ ಹತ್ತಿಗೆ ರೂ. 7,710 ಮತ್ತು ಉದ್ದನೆಯ ಎಳೆ ಹತ್ತಿಗೆ ರೂ. 8,110 ದರವನ್ನು ಘೋಷಿಸಿದೆ. ಬೆಂಬಲ ಬೆಲೆ ಯೋಜನೆಯಡಿ ನೋಂದಾಯಿಸಿಕೊಳ್ಳಲು 31-12-2025 ಕೊನೆಯ ದಿನವಾಗಿದ್ದು, ಜಿಲ್ಲೆಯ ರೈತರು ಸದರಿ ಯೋಜನೆಯ ಸದುಪಯೋಗಪಡೆದುಕೊಳ್ಳಲು ಭಾರತೀಯ ಹತ್ತಿ ನಿಗಮದ KAPAS Kisan Appನಲ್ಲಿ ಡಿಸೆಂಬರ್ 31ರೊಳಗಾಗಿ ನೋಂದಾಯಿಸಿಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ಸಮೀಪದ ರೈತ ಸಂಪರ್ಕ ಕೇಂದ್ರ, ಸಹಾಯಕ ಕೃಷಿ ನಿರ್ದೇಶಕರ ಕಛೇರಿ ಅಥವಾ ಭಾರತೀಯ ಹತ್ತಿ ನಿಗಮದ ಗದಗ ಕಛೇರಿಯನ್ನು ಸಂಪರ್ಕಿಸಲು ಜಂಟಿ ಕೃಷಿ ನಿರ್ದೇಶಕರಾದ ಚೇತನಾ ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಮಾಹಿತಿಗಾಗಿ ಭಾರತೀಯ ಹತ್ತಿ ನಿಗಮದ ಜಿ. ರಮೇಶ-78934 29671 ಮತ್ತು ರಮೇಶ ಜಿ.ಕೆ-96327 08161 ಇವರನ್ನು ಸಂಪರ್ಕಿಸಬಹುದಾಗಿದೆ.

# ಕೋಮುವಾದ ಹಿಮ್ಮೆಟ್ಟಿಸುವ ಶಪಥ



■ವಿಜಯಸಾಕ್ಷಿ ಸುದ್ದಿ, ಗದಗ

ಜಾತ್ಯಾತೀತ ಪ್ರಜಾಸತ್ತಾತ್ಮಕ ಭಾರತ ಇಂದು ಸಂದಿಗ್ಧ ಪರಿಸ್ಥಿತಿಯಲ್ಲಿ ಸಿಲುಕಿದೆ. ಬಹುಸಂಖ್ಯಾತ ದಲಿತ, ಹಿಂದುಳಿದ ಹಾಗೂ ಅಲ್ಪಸಂಖ್ಯಾತರ ಅಭಿವೃದ್ಧಿಗೆ ಮಾರಕವಾದ ಕೋಮುವಾದಿ ಆಡಳಿತ ಮುಕ್ತಗೊಳಿಸಿ ಭಾರತದ ಸಂವಿಧಾನಕ್ಕೆ ಪೂರಕವಾದ ಪ್ರಜಾಪ್ರಭುತ್ವ ಆಡಳಿತ ಸ್ಥಾಪಿಸಲು ಜಾತ್ಯಾತೀತ ಶಕ್ತಿಗಳು ಇಂದು ಒಂದಾಗುವ ಕಾಲ ಸನ್ನಿಹಿತವಾಗಿದೆ. ದೇಶದ ಬಹುಸಂಖ್ಯಾತರ ಅಭಿವೃದ್ಧಿಗೆ ಮಾರಕವಾದ ಕೋಮುವಾದಿ ಸರಕಾರವನ್ನು ಕಿತ್ತೊಗೆಯಲು ನಾವೆಲ್ಲರೂ ಮತ್ತೊಮ್ಮೆ 1947ರ ಸ್ವಾತಂತ್ರ್ಯ ಸಂಗ್ರಾಮಕ್ಕೆ ಸಜ್ಜಾಗಬೇಕು ಎಂದು ಸಿಪಿಐ ಪಕ್ಷದ ರಾಜ್ಯ ಕಾರ್ಯದರ್ಶಿ ಸ್ವಾತಿ ಸುಂದರೇಶ ಹೇಳಿದರು.

ಅವರು ನಗರದ ಗಾಂಧಿ ವೃತ್ತದಲ್ಲಿ ಸಂಘಟಿಸಿದ್ದ ಸಮತಾ ರಾಜ್ಯದ ಕನಸುಗಳೊಂದಿಗೆ ಶ್ರಮ ಶಕ್ತಿಯ ಸಂಘರ್ಷದ ಶತಮಾನದ ಪಯಣ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡುತ್ತಿದ್ದರು.

ರಾಜ್ಯಾದ್ಯಂತ ಸಿಪಿಐ ಶತಮಾನೋತ್ಸವ ಜಾಥಾ ಸಂಚರಿಸುತ್ತಿದ್ದು, ಡಿ. 23ಕ್ಕೆ ಜಾಥಾ ಬೆಂಗಳೂರಿನಲ್ಲಿ ಮುಕ್ತಾಯಗೊಳ್ಳಲಿದೆ. ರಾಜ್ಯಾದ್ಯಂತ ಜಾತ್ಯಾತೀತ, ಹಿಂದುಳಿದ, ಅಲ್ಪಸಂಖ್ಯಾತ ಸಂಘಟನೆಗಳು ಒಂದೇ ವೇದಿಕೆಯಲ್ಲಿ ಸೇರಿ ಕೋಮುವಾದ ಹಿಮ್ಮೆಟ್ಟಿಸುವ ಶಪಥ ಮಾಡಿದ್ದಾರೆ ಎಂದು ತಿಳಿಸಿದರು.


ಜಾಥಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಹಿರಿಯ ದಲಿತ ಮುಖಂಡ ವೆಂಕಟೇಶಯ್ಯ, ದಲಿತ ನಾಯಕರಾದ ಸತೀಶ ಹೂಲಿ, ರಮೇಶ ಬಾಳಮ್ಮನವರ, ನಾರಾಯಣಸ್ವಾಮಿ, ಎಐಸಿಯುಟಿ ನವಲೂರ, ಸಿಪಿಐನ ಷಣ್ಮುಖಸ್ವಾಮಿ, ಸತೀಶ ಪಾಸಿ, ವಾಸುದೇವ ಹುಣಸಿಮರದ, ಬಸವರಾಜ ಪೂಜಾರ ಸಂದರ್ಭೋಚಿತವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ದಲಿತ ಕಲಾಮಂಡಳಿ ಹಾಗೂ ಸಿಪಿಐ ಕಲಾ ತಂಡದಿಂದ ಕ್ರಾಂತಿಗೀತೆ ಹಾಡಿದರು. ಇದೇ ಸಂದರ್ಭದಲ್ಲಿ ಹಿರಿಯ ಸಾಹಿತಿ ದಿ. ಬಿ. ಬಾಬು ಅವರಿಗೆ ಶ್ರದ್ಧಾಂಜಲಿ ಅರ್ಪಿಸಲಾಯಿತು.

# ಗರ್ಭಿಣಿ ಗೋಮಾತೆಗೆ ಸೀಮಂತ ಕಾರ್ಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗೋವು ದೇವರ ಸ್ವರೂಪ ಎಂಬ ಭಾವ ಹಿಂದೂಗಳಲ್ಲಿದೆ. ಪ್ರತಿಯೊಬ್ಬ ರೈತರು ಗೋವಿಗೆ ವಿಶೇಷ ಸ್ಥಾನಮಾನ ಕೊಟ್ಟು ಅದನ್ನು ಮನೆ ಮಗಳಂತೆ ನೋಡಿಕೊಳ್ಳುತ್ತಾರೆ. ದನಕರುಗಳು ರೈತರ ಜೀವನ ನಾಡಿಗಳಾಗಿವೆ. ಈ ನಿಟ್ಟಿನಲ್ಲಿ ಸಮೀಪದ ರಾಮಗಿರಿ ಗ್ರಾಮದ ರೈತ ಕುಟುಂಬ ಚೊಚ್ಚಲ ಹೆರಿಗೆಗೆ ಸಿದ್ಧವಾಗಿರುವ ಗೋವಿಗೆ ಶುಕ್ರವಾರ ಕುಟುಂಬಸ್ಥರೆಲ್ಲರೂ ಸೇರಿ ಸಿಂಗರಿಸಿ ಹಬ್ಬದಂತೆ ಗೋವಿಗೆ ಸೀಮಂತ ಮಾಡಿದ್ದಾರೆ.



ತುಂಬು ಗರ್ಭಿಣಿಯರಿಗೆ ಸೀಮಂತ ಕಾರ್ಯ ಮಾಡುವುದು ವಾಡಿಕೆ. ದಿನಗಳು ತುಂಬಿದ ವೇಳೆಯಲ್ಲಿ ಮಗಳಿಗೆ ಸೀಮಂತ ಕಾರ್ಯ ಮಾಡುವಂತೆ ಗೋವಿಗೂ ಸೀರೆ ಉಡಿಸಿ, ಸಿಂಗರಿಸಿ, ಸೋಬಾನೆ ಪದ ಹಾಡಿ, ಆರತಿ ಬೆಳಗಿ ಮನೆ ಮಗಳಿಗೆ ಆಶೀರ್ವದಿಸುವಂತೆ ತಾಲೂಕಿನ ರಾಮಗಿರಿ ಗ್ರಾಮದ ನಾಗರಾಜ ಮಡಿವಾಳರ ಮನೆಯಲ್ಲಿ ಗರ್ಭಿಣಿ ಆಕಳಿಗೆ ಸೀಮಂತದ ಕಾರ್ಯ ನೆರವೇರಿಸಿದ್ದಾರೆ. ಅಲ್ಲದೆ ವಿವಿಧ ಭಕ್ಷ ಮಾಡಿ ಗ್ರಾಮಸ್ಥರಿಗೆ ಉಣಬಡಿಸಿ ಸಂಭ್ರಮಿಸಿದ್ದಾರೆ.

ರೈತ ನಾಗಾರಾಜ ಮಡಿವಾಳರ ಮಾತನಾಡಿ, ಭಾರತೀಯ ಸಂಸ್ಕೃತಿ-ಪರಂಪರೆಯಲ್ಲಿ ಅನಾದಿ ಕಾಲದಿಂದಲೂ ಕಾಮಧೇನು ಕಲ್ಪವೃಕ್ಷ ಎಂಬಂತೆ ಗೋಮಾತೆಗೆ ವಿಶಿಷ್ಟ ಸ್ಥಾನವಿದೆ. ಅಮೃತ ತಳಿಯ ಗೋಮಾತೆ ಚೊಚ್ಚಲ ಕರುವಿಗೆ ಜನ್ಮ ನೀಡುತ್ತಿರುವುದರಿಂದ ಯಥಾವತ್ತಾಗಿ, ಪೂಜೆ ಪುನಸ್ಕಾರಗಳು ಎಲ್ಲ ಕಾರ್ಯ ಸಮರ್ಪಿಸಿ ಗೋಮಾತೆಗೆ ಗೌರವ ಸಲ್ಲಿಸುತ್ತಿದ್ದೇವೆ ಎಂದರು.

ನಾಗರಾಜ ಮಡಿವಾಳರ ತಮ್ಮ ಮನೆಯಲ್ಲಿ ಗೋವು ಸಾಕಿದಾಗಿನಿಂದಲೂ ತಮ್ಮ ಮನೆಗೆ ಒಳ್ಳೆಯದಾಗಿದೆ ಎನ್ನುವ ನಂಬಿಕೆಯಿಂದ ಈ ಸಂಪ್ರದಾಯ ಹಬ್ಬದಂತೆ ಆಚರಿಸಿದರು. ಗೋಮಾತೆಗೆ ಆರತಿ ಬೆಳಗಿದ ಮುತ್ತೈದೆಯರು ಗೋವಿಗೆ ನಮಸ್ಕರಿಸಿ ಆಶೀರ್ವಾದ ಪಡೆದರು. ನೂರಾರು ಜನರಿಗೆ ಕರಿಗಡಬು, ತುಪ್ಪ, ರೊಟ್ಟಿ, ಚಪಾತಿ, ಕಾಳು ಪಲ್ಲೆ ಸೇರಿದಂತೆ ಸವಿ ಭೋಜನ ಉಣಬಡಿಸಿದರು. ಈ ಅಪರೂಪದ ಕಾರ್ಯಕ್ರಮ ಜನತೆಯ ಮೆಚ್ಚುಗೆಗೆ ಪಾತ್ರವಾಯಿತು.

ಈ ವೇಳೆ ಈರಮ್ಮ ಮಡಿವಾಳರ, ಗುಡ್ಡಪ್ಪ ಬೇವಿನಮರದ, ಮಾರ್ತಾಂಡಪ್ಪ ಗಂಜಿಗಟ್ಟಿ, ಪರಸಪ್ಪ ಹುಣಸೀಮರದ, ನಬಿಸಾಬ್ ಅಣ್ಣಿಗೇರಿ, ಶಿವಾನಂದ, ಲಕ್ಷಣ ಯರಗುಪ್ಪಿ, ಎಸ್.ಬಿ. ಸುಂಕದ, ಹನಮಂತಪ್ಪ ಹುಣಶಿಮರದ ಸೇರಿದಂತೆ ಮನೆಯ ಸದಸ್ಯರೆಲ್ಲರೂ ಹಾಜರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka